# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಬದುಕಿನಲ್ಲಿ ಏನೇ ನಡೆದರೂ, ಏನೇ
ಸಂಭವಿಸಿದರೂ ಒಳ್ಳೆಯದೇ ಆಗಲಿದೆ.
ವರ್ತಮಾನದಲ್ಲಿ ಏನಾಗುತ್ತಿದೆಯೋ
ಅದೆಲ್ಲವೂ ಉತ್ತಮವಾಗಿಯೇ ನಡೆಯುತ್ತಿದೆ..
ಮುಂದೆ ಏನಾಗಲಿದೆಯೋ ಅದು ಕೂಡ
ಚೆನ್ನಾಗಿಯೇ ನಡೆಯಲಿದೆ..
ಭವಿಷ್ಯದ ಬಗ್ಗೆ ಎಂದಿಗೂ ಚಿಂತಿಸಬೇಡಿ
ವರ್ತಮಾನದಲ್ಲಿಯೇ ಜೀವಿಸಿ..
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 28-03-2025 to 03-04-2025 ಬೆಲೆ: 7-00 ಸಂಪುಟ–4 ಸಂಚಿಕೆ–40 ಪುಟಗಳು–6












ಇಂದಿನ ಆದುನಿಕ ಯುಗದಲ್ಲಿ ತಂತ್ರಜ್ಞಾನ ಬೆಳೆದಂತೆ ಅದರಿಂದ ಉಪಯೋಗದ ಜೊತೆ ಅನಾಹುತಗಳು ಹೆಚ್ಚಾಗಿ ಆಗುತ್ತಿರುವುದು ಕಾಣಬಹುದು. ಇತ್ತೀಚಿನ ದಿನಗಳಲ್ಲಿ ಮೊಬೈಲ್ ಬಳಕೆದಾರರಿಗೆ ಅನುಕೂಲವಾಗಲೆಂದು ತರಾವರಿ ಇಯರ್ ಫೋನ್‌ಗಳು ಮಾರುಕಟ್ಟೆಯಲ್ಲಿ ಬಂದಿವೆ. ಇದರಿಂದ ಉಪಯೋಗ ಇದೆಯಾದರೂ ವಾಹನ ಚಲಾಯಿಸುವಾಗ ಕಿವಿಗೆ ಇದನ್ನು ಹಾಕಿಕೊಂಡು ಸಂಗೀತ ಕೇಳುವುದು, ಪೋನ್‌ನಲ್ಲಿ ಮಾತನಾಡುವುದು ಮಾಡುತ್ತಿರುವುದು ಸರ್ವೇ ಸಾಮಾನ್ಯವಾಗುತ್ತಿದ್ದು, ಇದರಿಂದ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ. ಆದ್ದರಿಂದ ವಾಹನ ಚಲಾಯಿಸುವ ಸಮಯದಲ್ಲಿ ಯಾವುದೇ ಕಾರಣಕ್ಕೂ ಇಯರ್ ಫೋನ್ ಬಳಸದಂತೆ ಜನರಿಗೆ ಅರಿವು ಮೂಡಬೇಕಾಗಿದೆ.

## ಅಕ್ರಮ ಗೋಸಾಗಾಟಗಾರರ ಹೆಡೆಮುರಿ ಕಟ್ಟಿ –ಕಾಮತ್



**ಮಂಗಳೂರು:** ನಗರದಲ್ಲಿ ಅಕ್ರಮ ಗೋಮಾಂಸ ಸಾಗಾಟದ ಜಾಲವು ವಿಸ್ತಾರಗೊಂಡಿದ್ದು ಕಳೆದ ಒಂದು ವಾರದಲ್ಲಿ ಹಿಂದೂ ಸಂಘಟನೆಗಳ ಮಾಹಿತಿಯ ಮೇರೆಗೆ ಪೊಲೀಸರು ನಾಲ್ಕೈದು ಕಡೆ ವಾಹನಗಳನ್ನು ತಡೆದು ಒಂದು ಟನ್‌ಗೂ ಅಧಿಕ ಗೋಮಾಂಸವನ್ನು ಪತ್ತೆ ಹಚ್ಚಿದ್ದಾರೆ. ಪೊಲೀಸ್ ಇಲಾಖೆಯು ಇದನ್ನು ಗಂಭೀರವಾಗಿ ಪರಿಗಣಿಸಿ ಸಮಾಜದ ಸ್ವಾಸ್ಥ್ಯ ಕದಡುವವರ ಹೆಡೆಮುರಿ ಕಟ್ಟಬೇಕೆಂದು ಶಾಸಕ ವೇದವ್ಯಾಸ ಕಾಮತ್‌ರವರು ಆಗ್ರಹಿಸಿದ್ದಾರೆ. ಈ ಹಿಂದೆ ಕುದ್ರೋಳಿಯಲ್ಲಿ **3ನೇ ಪುಟಕ್ಕೆ**

## ಸರಕಾರದಿಂದ ಮತ್ತೊಂದು ಗ್ಯಾರಂಟಿ ಬರೆ

**ಬೆಂಗಳೂರು:** ಕರ್ನಾಟಕದ ಜನತೆಗೆ ಕಾಂಗ್ರೆಸ್ ಸರ್ಕಾರ ಮತ್ತೊಂದು ಬರೆ ಎಳೆದಿದೆ. ಬಸ್ ಟಿಕೆಟ್ ದರ, ಮೆಟ್ರೋ ದರ ಏರಿಕೆ, ವಿದ್ಯುತ್ ಬೆಲೆ ಏರಿಕೆ ಬೆನ್ನಲ್ಲೇ, ಇದೀಗ ನಂದಿನಿ ಹಾಲಿನ ದರ ಪ್ರತಿ ಲೀಟರ್‌ಗೆ ಮತ್ತೆ 4 ರೂಪಾಯಿ ಏರಿಕೆ ಮಾಡಿ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ದೊರಕಿದೆ. ವಿಧಾನ ಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನಂದಿನಿ ಹಾಲಿನ ದರ ಪ್ರತಿ ಲೀಟರ್‌ಗೆ 4 ರೂಪಾಯಿ ಏರಿಕೆ ಮಾಡಿ ಅನುಮೋದನೆ ದೊರಕಿದೆ. ಈಗಾಗಲೇ ರಾಜ್ಯ ಸರ್ಕಾರ ಕೆಎಸ್ಸಾರ್ಟಿಸಿ, ವಿದ್ಯುತ್ ದರ ಮತ್ತು ಬೆಂಗಳೂರಿನಲ್ಲಿ ಮೆಟ್ರೋ ಪ್ರಯಾಣದ **3ನೇ ಪುಟಕ್ಕೆ**



## ವಿದ್ಯಾರ್ಥಿಗಳು ತುಳು ರಾಯಭಾರಿಗಳಾಬೇಕು –ಖಾದರ್

**ಮಂಗಳೂರು:** ವಿದ್ಯಾರ್ಥಿಗಳು ತುಳು ರಾಯಭಾರಿಗಳಾಬೇಕು. ಪಾಶ್ಚಾತ್ಯ, ಹೊರಗಿನ ಸಂಸ್ಕೃತಿಯ ದಾಳಿಯಿಂದ ತುಳು ಭಾಷೆ, ಸಂಸ್ಕೃತಿಯನ್ನು ರಕ್ಷಿಸುವ ನಿಟ್ಟಿನಲ್ಲಿ ತುಳು ಸಾಹಿತ್ಯ ಅಕಾಡೆಮಿ, ತುಳು ಪರಿಷತ್ ಶ್ರಮಿಸುತ್ತಿದೆ. ಈ ಉದ್ದೇಶಕ್ಕಾಗಿ ತುಳು ವಿದ್ಯಾರ್ಥಿ ಸಮ್ಮೇಳನವನ್ನು ಆಯೋಜಿಸಲಾಗಿದೆ ಎಂದು ವಿಧಾನ ಸಭೆಯ ಸ್ಪೀಕರ್ ಯು.ಟಿ.ಖಾದರ್ ಅಭಿಪ್ರಾಯಪಟ್ಟಿದ್ದಾರೆ. ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ ಮತ್ತು ತುಳು ಪರಿಷತ್ ಕುಡ್ಲ ಇವುಗಳ ಸಂಯುಕ್ತ ಆಶ್ರಯದಲ್ಲಿ ನಗರದ ಕುದ್ಮುಲ್ ರಂಗರಾವ್ ಪುರಭವನದಲ್ಲಿ ನಡೆದ ಎರಡನೇ **3ನೇ ಪುಟಕ್ಕೆ**









# ಅಕ್ರಮ ಗೋಸಾಗಾಟಗಾರರ ಹೆಡೆಮುರಿ ಕಟ್ಟಿ – ಕಾಮತ್

ಒಂದನೇ ಪುಟದಿಂದ......

ಕಾರ್ಯನಿರ್ವಹಿಸುತ್ತಿದ್ದ ಕಸಾಯಿಖಾನೆಯು ರಾಜ್ಯ ಮಾಲಿನ್ಯ ಮಂಡಳಿಯ ಆದೇಶದಂತೆ ಸ್ಥಗಿತವಾಗಿ 4 ವರ್ಷಗಳೇ ಕಳೆದಿದೆ. ಆದರೂ ಸಹ ಕದ್ದ ಗೋವುಗಳ ವಾಹನಗಳು ಅಲ್ಲಿಗೇ ಯಾಕೆ ಹೋಗುತ್ತಿವೆ? ಯಾರ ಕುಮ್ಮಕ್ಕಿನಿಂದ ಅಲ್ಲಿ ರಾಜಾರೋಷವಾಗಿ ಗೋವಧೆ ನಡೆಯತ್ತಿದೆ? ಕಾನೂನು ಹಾಗೂ ಪೊಲೀಸ್ ಇಲಾಖೆ ಬಗ್ಗೆ ಭಯವೇಇಲ್ಲವಾದಾಗ ಮಾತ್ರ ಇಂತಹ ಅಕ್ರಮಗಳು ನಡೆಯಲು ಸಾಧ್ಯ ಎಂದು ಶಾಸಕರು ಆಕ್ರೋಶ ವ್ಯಕ್ತಪಡಿಸಿದರು. ಹಿಂದೂಗಳ ಭಾವನೆಗಳಿಗೆ ಧಕ್ಕೆತರುತ್ತಿರುವ ದಂಧೆಕೋರರಿಗೆ ಕಾಂಗ್ರೆಸ್ ಸರ್ಕಾರ ನಮ್ಮ ಪರವಾಗಿದೆ ಎಂಬ ಹುಂಬ ಧೈರ್ಯ ಇರಬಹುದು. ಅದಕ್ಕೆ ಪೊಲೀಸರು ಕಾನೂನಿನ ಪ್ರಕಾರವೇ ಉತ್ತರ ಕೊಡಬೇಕು. ಗೋಹತ್ಯಾ ನಿಷೇಧ ಕಾನೂನಿನಂತೆ ಆರೋಪಿಗಳಿಗೆ ಗರಿಷ್ಠ ಶಿಕ್ಷೆ ಸಹಿತ ಅಕ್ರಮಕ್ಕೆ ಬಳಸಿದ ವಾಹನ ಹಾಗೂ ಸ್ಥಳವನ್ನು ಮುಟ್ಟುಗೋಲು ಹಾಕಿಕೊಂಡು ತಕ್ಕ ಶಾಸ್ತಿ ಮಾಡಬೇಕು. ಇಲ್ಲದಿದ್ದರೆ ಮುಂದೇನಾದರೂ ಅನಾಹುತಗಳು ನಡೆದರೆರಾಜ್ಯ ಸರ್ಕಾರವೇ ನೇರ ಹೊಣೆಯಾಗುತ್ತದೆಎಂದು ಎಚ್ಚರಿಸಿದರು.

# ಸರಕಾರದಿಂದ ಮತ್ತೊಂದು ಗ್ಯಾರಂಟಿ ಬರೆ

ಒಂದನೇ ಪುಟದಿಂದ......

ಟಿಕೆಟ್ ದರ ಏರಿಕೆ ಮಾಡಿ ರಾಜ್ಯದ ಜನತೆಯ ಕೆಂಗಣ್ಣಿಗೆ ಗುರಿಯಾಗಿತ್ತು. ಇದೀಗ ಮತ್ತೆ ನಂದಿನಿ ಹಾಲಿನ ದರ 4 ರೂಏರಿಕೆ ಮಾಡಿ ಜನರಿಗೆ ಗಾಯದ ಮೇಲೆ ಬರೆ ಎಳೆದಿದೆ. ಹಾಲು ಒಕ್ಕೂಟ ಹಾಗೂ ರೈತರಿಂದ ಹಾಲು ದರ ಹೆಚ್ಚಳಕ್ಕೆ ನಿರಂತರವಾಗಿ ಬೇಡಿಕೆ ಹೆಚ್ಚಿದ ಹಿನ್ನೆಲೆ ಪ್ರತಿ ಲೀಟರ್ ಹಾಲಿನ ದರ 4ರೂ. ಹೆಚ್ಚಳ ಮಾಡಲಾಗಿದ್ದು, ಈ ಮೂಲಕ ರೈತರು ಹಾಗೂ ಹಾಲು ಒಕ್ಕೂಟಗಳ ಮನವಿಯನ್ನು ರಾಜ್ಯ ಸಚಿವ ಸಂಪುಟ ಒಪ್ಪಿಗೆ ಸೂಚಿಸಿದೆ. ಇನ್ನೂ ಒಂದೇ ವರ್ಷದಲ್ಲಿ ಎರಡು ಬಾರಿಗೆ ಹಾಲಿನ ದರಏರಿಕೆ ಮಾಡಿದಂತಾಗಿದೆ. ಇದೇ ಫೆಬ್ರವರಿಯಲ್ಲಿ ಪ್ರತಿ ಲೀಟರ್‌ಗೆ 2 ರೂ ಏರಿಕೆ ಮಾಡಲಾಗಿತ್ತು. ಇದೀಗ ಪ್ರತಿ ಲೀಟರ್‌ಗೆ ಬರೋಬ್ಬರಿ ನಾಲ್ಕು ರೂಪಾಯಿಏರಿಕೆ ಮಾಡಲಾಗಿದ್ದು, ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿ ಹೋಗಿದ್ದ ರಾಜ್ಯದ ಜನರಿಗೆ ಹಾಲಿನ ದರಏರಿಕೆ ಮಾಡುವ ಮೂಲಕ ಮತ್ತೆ ಬೆಲೆ ಏರಿಕೆಯ ಬರೆ ಹಾಕಿದೆ. ಬಹುದಿನಗಳಿಂದ ರೈತರು ಹಾಗೂ ಹಾಲು ಒಕ್ಕೂಟಗಳ ಒತ್ತಡದಿಂದ ನಂದಿನಿ ಉತ್ಪನ್ನಗಳ ದರಏರಿಕೆಯ ಪ್ರಸ್ತಾಪ ಕೇಳಿಬಂದಿತ್ತು. ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ನಿವಾಸದಲ್ಲಿ ಅಧಿಕಾರಿಗಳ ಜೊತೆ ಸಭೆ ನಡೆಸಿ ದರ ಹೆಚ್ಚಳಕ್ಕೆ ಒಪ್ಪಿಗೆ ನೀಡಿರಲಿಲ್ಲ. ಹಾಲಿ ದರ ಏರಿಕೆಯಾದರೆ, ಆ ಹಣ ರೈತರಿಗೆ ಸಿಗಲಿದೆ ಎಂದು ಚರ್ಚೆಯಾಗಿತ್ತು. ಅಲ್ಲದೇ ದರ ಹೆಚ್ಚಳದ ಸಾಧಕ, ಬಾಧಕಗಳ ಬಗ್ಗೆ ಚರ್ಚೆ ನಡೆದಿದ್ದು, ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದರು. ಇದರ ಬೆನ್ನಲ್ಲೇ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ನಂದಿನಿ ಹಾಲಿನ ದರ ಪ್ರತಿ ಲೀಟರ್‌ಗೆ 4 ರೂಪಾಯಿ ಏರಿಕೆಗೆ ಗ್ರೀನ್ ಸಿಗ್ನಲ್ ಸಿಕ್ಕಿದೆ. ಈಗ ನೀಲಿ ಪ್ಯಾಕೆಟ್ ಹಾಲಿನ ದರ 44 ರೂಪಾಯಿಯಿಂದ 48 ರೂಪಾಯಿಗೆ ಏರಿಕೆ. ಆರೆಂಜ್ ಪ್ಯಾಕೆಟ್ ನಂದಿನಿ ಹಾಲಿನ ದರ ರೂ.54 ರಿಂದ 58 ರೂಗೆ ಏರಿಕೆ. ಸಮೃದ್ಧಿ ಪ್ಯಾಕೆಟ್ ನಂದಿನಿ ಹಾಲಿನ ದರ ರೂ.56 ರಿಂದ 60ಕ್ಕೆ ಏರಿಕೆ. ಗ್ರೀನ್ ಸ್ಪೆಷಲ್ ಹಾಲಿನ ದರ ರೂ.54 ರಿಂದ 58ಕ್ಕೆ ಏರಿಕೆ. ನಾರ್ಮಲ್‌ಗ್ರೀನ್ ಹಾಲಿನದರ ರೂ.52ರಿಂದ 56 ರೂಪಾಯಿಗೆ ಹೆಚ್ಚಳ ಆಗಲಿದೆ.

# ವಿದ್ಯಾರ್ಥಿಗಳು ತುಳು ರಾಯಭಾರಿಗಳಾಬೇಕು – ಯು ಟಿ ಖಾದರ್

ಒಂದನೇ ಪುಟದಿಂದ......

ವಿದ್ಯಾರ್ಥಿ ಸಮ್ಮೇಳದಲ್ಲಿ ಮಾತನಾಡಿದ ಅವರು ತುಳು ಭಾಷೆ, ಸಂಸ್ಕೃತಿಗೆ ಹಿರಿಯರ ಕೊಡುಗೆ ದೊಡ್ಡದು. ಒಂದೊಮ್ಮೆ ತುಳುವಿಗೆ ಗಂಡಾಂತರ ಎದುರಾದಾಗ ತುಳುವಿಗೆ ಶಕ್ತಿ ನೀಡಿದ್ದು ತುಳು ನಾಟಕ, ಯಕ್ಷಗಾನ, ಸಿನಿಮಾ ಎಂದರು. ತುಳುನಾಡಿನ ಸಂಸ್ಕೃತಿ ಭದ್ರವಾಗಿದೆ. ಹೊರಗಿನ ಯಾವುದೇ ದಾಳಿಯನ್ನು ಸಮರ್ಥ ಎದುರಿಸಲು ಈಗ ಶಕ್ತವಾಗಿದೆ. ತುಳು ಪ್ರದೇಶದಲ್ಲಿ ಪ್ರತಿಯೊಂದು ಗ್ರಾಮ ಮಟ್ಟದಲ್ಲೂ ತುಳುವಿಗೆ ಸಂಬಂಧಿಸಿ ಕಾರ್ಯಕ್ರಮಗಳಿಗೆ ಗ್ರಾಮ ಪಂಚಾಯತ್‌ಗಳು ಅನುದಾನ ಒದಗಿಸಬೇಕಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಅವಕಾಶವನ್ನು ಬಳಸಿಕೊಳ್ಳಬೇಕು. ಕರ್ನಾಟಕದಲ್ಲಿ ತುಳುವನ್ನು ಎರಡನೇ ಭಾಷೆಯಾಗಿ ಮಾಡುವ ನಿಟ್ಟಿನಲ್ಲಿ ಮುಖ್ಯಮಂತ್ರಿಅವರಲ್ಲಿಚರ್ಚೆ ನಡೆಸುವುದಾಗಿ ತಿಳಿಸಿದರು.

# ಇಂಜಿನಿಯರಿಂಗ್ ಪದವೀದರರಿಂದ ಅರ್ಜಿ ಆಹ್ವಾನ

ಮಂಗಳೂರು – IISC, IIT ಮತ್ತು ಸಂಸ್ಥೆಗಳ ಮೂಲಕ Artificial Intelligence and Machine Learning ವೃತ್ತಿಪರ ತರಬೇತಿಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ ಇಂಜಿನಿಯರಿಂಗ್ ಪದವೀಧರರಿಗೆ ರೂ.15 ಸಾವಿರ ಶಿಷ್ಯವೇತನ/ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಶಿಷ್ಯವೇತನ/ತರಬೇತಿಗಾಗಿ ಅರ್ಜಿ ಸಲ್ಲಿಸಲು ಅರ್ಹ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಮಾಜ ಕಲ್ಯಾಣ ಇಲಾಖೆ ಕಚೇರಿಗಳಲ್ಲಿ ಅರ್ಜಿ ಸಲ್ಲಿಸಬೇಕು.

# ಅರ್ಜಿ ಸಲ್ಲಿಸಲು ಕಾಲಾವಕಾಶ

ಮಡಿಕೇರಿ–2025–26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ (ರಾಜ್ಯ ಪಠ್ಯಕ್ರಮ) ಮತ್ತು ಡಾ.ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗಳ 6ನೇ ತರಗತಿಗೆ ಉಚಿತ (ಸಿಬಿಎಸ್‌ಇ) (ಆಂಗ್ಲ ಮಾಧ್ಯಮ) ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 7676473767, 8105409405, 8548068519, 9900731037ನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಆರ್.ಕೃಷ್ಣಮೂರ್ತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವಸ್ಥಾನ ವ್ಯವಸ್ಥಾಪನಾ ಸಮಿತಿಗೆ ಅರ್ಜಿ ಆಹ್ವಾನ

ಮಂಗಳೂರು–ದ.ಕ ಜಿಲ್ಲೆಯ ಪ್ರವರ್ಗ "ಸಿ" ವರ್ಗದ ದೇವಸ್ಥಾನ/ದೈವಸ್ಥಾನಗಳಿಗೆ ಹೊಸದಾಗಿ 9 ಜನ ಸದಸ್ಯರಿರುವ ವ್ಯವಸ್ಥಾಪನಾ ಸಮಿತಿಯನ್ನು ರಚಿಸಲು ಆಸಕ್ತ ಭಕ್ತಾದಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಎಪ್ರಿಲ್ 15ರೊಳಗಾಗಿ ಧಾರ್ಮಿಕ ದತ್ತಿ ಇಲಾಖೆ ಸಹಾಯಕ ಆಯುಕ್ತರಿಗೆ ಸಲ್ಲಿಸಬೇಕು.

# ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ ಉಚಿತ ಕೌಶಲ್ಯ ತರಬೇತಿ

ಮಂಗಳೂರು–ಮಂಗಳೂರಿನ ಕದ್ರಿ ಹಿಲ್ಸ್‌ನಲ್ಲಿರುವ ಮಹಿಳಾ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಹಾಗೂ ಕಾರ್ಕಳ ಪಾಲಿಟೆಕ್ನಿಕ್ ಆವರಣದಲ್ಲಿರುವ ಕೆ.ಜಿ.ಟಿ.ಟಿ.ಐ ವಿಸ್ತರಣಾ ಕೇಂದ್ರದಲ್ಲಿ ವಿವಿಧ ಅಲ್ಪಾವಧಿ ಕೌಶಲ್ಯ ತರಬೇತಿಗಳಿಗೆ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. ಸಂ.: 0824–2211477, 8277741731 ಸಂಪರ್ಕಿಸಬಹುದು ಎಂದು ಕೆ.ಜಿ.ಟಿ.ಟಿ.ಐ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಅರ್ಜಿ ಆಹ್ವಾನ

ಶಿವಮೊಗ್ಗ : 2024–25ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯದವರಿಗೆ ಹಾಗೂ ಅರಣ್ಯ ಆಧಾರಿತ ಆದಿವಾಸಿ ಸಮುದಾಯದ ವಿದ್ಯಾವಂತ ನಿರುದ್ಯೋಗಿ ಯುವಕ/ಯುವತಿಯರಿಗೆ ವಿವಿಧ ಕೌಶಲ್ಯಾಭಿವೃದ್ಧಿ (ತಾಂತ್ರಿಕ ನೈಪುಣ್ಯತೆ) ತರಬೇತಿಯನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವಿದ್ಯಾವಂತ ನಿರುದ್ಯೋಗ ಯುವಕ/ಯುವತಿಯರು ಅರ್ಜಿಯನ್ನು ಉಪ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಶಿವಮೊಗ್ಗ ಇಲ್ಲಿ ಮತ್ತು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರುಗಳ ಕಚೇರಿ, ಸಮಾಜ ಕಲ್ಯಾಣ ಇಲಾಖೆ ಮೂಲಕ ಆಫ್‌ಲೈನ್‌ನಲ್ಲಿ ಏ.5 ರೊಳಗೆ ಸಲ್ಲಿಸಬಹುದು.

# ಸೇವಾನ್ಯೂನತೆ : ಪರಿಹಾರ ನೀಡಲು ಆದೇಶ

ಶಿವಮೊಗ್ಗ : ಶ್ರೀಮತಿ ಭಾಗ್ಯ ಮತ್ತು ನಾಗರಾಜ ಇವರುಗಳು ಎಲ್‌ಐಸಿ ಇಂಡಿಯಾ ಇವರ ವಿರುದ್ದ ತಮ್ಮ ಸಹೋದರನಿಗೆ ದೊರಕಬೇಕಾದ ವಿಮಾ ಮೊತ್ತ ನೀಡದೇ ಸೇವಾ ನ್ಯೂನತೆ ಎಸಗಿರುವ ಕುರಿತು ಸಲ್ಲಿಸಿದ ದೂರನ್ನು ಆಲಿಸಿದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಸೇವಾ ನ್ಯೂನತೆ ಎಸಗಿರುವ ವಿಮಾ ಕಂಪೆನಿಯು ದೂರುದಾರರಿಗೆ ಸೂಕ್ತ ಪರಿಹಾರ ನೀಡುವಂತೆ ತೀರ್ಪು ನೀಡಿದೆ.

# ಸ್ಟಾಫ್ ನರ್ಸ್ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ–2024–25ನೇ ಸಾಲಿಗೆ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಕ್ಯಾತೆ ಗ್ರಾಮ, ಕೊಡ್ಲಿಪೇಟೆ, ಸೋಮವಾರಪೇಟೆ ತಾ., ಕೊಡಗು ಜಿಲ್ಲೆ, ಇಲ್ಲಿಗೆ ಸ್ಟಾಫ್ ನರ್ಸ್(01 ಹುದ್ದೆ) ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಮೌಲಾನಾ ಆಜಾದ್ ಭವನ, ಎಫ್.ಎಂ.ಸಿ. ಕಾಲೇಜು ಹತ್ತಿರ, ಮಡಿಕೇರಿ, ಕಚೇರಿ ದೂರವಾಣಿ ಸಂಖ್ಯೆ: 08272-225528, 9686138688, 9632404314(ವಾಟ್ಸ್‌ಆಫ್), 7676473767 ನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ಬಿಜೆಪಿ ದ್ವೇಷದ ರಾಜಕೀಯ ಮಾಡುತ್ತಿದೆ – ಹರೀಶ್ ಕುಮಾರ್




ಮಂಗಳೂರು: ಸರ್ವರಿಗೂ ಸಮಪಾಲು, ಸಮಬಾಳು ಎಂಬ ಸಂವಿಧಾನದ ಆಶಯದಂತೆ ಮಂಡಿಸಲಾಗಿರುವ ರಾಜ್ಯ ಸರಕಾರದ ಬಜೆಟನ್ನು ಹಲಾಲ್ ಬಜೆಟ್ ಎಂದು ಟೀಕಿಸುವ ಮೂಲಕ ಬಿಜೆಪಿ ದ್ವೇಷದ ರಾಜಕೀಯ ಮಾಡುತ್ತಿದೆ ಎಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹರೀಶ್ ಕುಮಾರ್ ಆರೋಪಿಸಿದ್ದಾರೆ. ಕೇಂದ್ರದಲ್ಲಿ ಬಿಜೆಪಿ ನಾಯಕರು ಸಬ್‌ಕಾ ಸಾಥ್ ಸಬ್ ಕಾ ವಿಕಾಸ್ ಎನ್ನುತ್ತಾರೆ. ಅದಕ್ಕೆ ಪೂರಕವಾಗಿ ರಾಜ್ಯದಲ್ಲಿ ಬಜೆಟ್‌ನ ಶೇ.1ರಷ್ಟು ಪಾಲನ್ನು ಶೇ. 20ರಷ್ಟಿರುವ ರಾಜ್ಯ ಜನಸಂಖ್ಯೆಯ ಎಲ್ಲಾ ವರ್ಗದ ಅಲ್ಪಸಂಖ್ಯಾತರಿಗೆ ನೀಡಿದರೆ ಅದನ್ನು ಹಲಾಲ್ ಎನ್ನುವ ಮೂಲಕ ತಮ್ಮದೇ ನಾಯಕರ ಮಾತುಗಳಿಗೆ ವಿರುದ್ಧವಾಗಿ ವಿಭಜನಾಕಾರಿ ಮಾತುಗಳನ್ನಾಡುವ ಮೂಲಕ ಒಡೆದು ಆಳುವ ರಾಜಕೀಯ ಮಾಡುತ್ತಿದೆ. ಬಿಜೆಪಿಯ ಸಬ್ ಕಾ ಸಾತ್ ಸಬ್ ಕಾ ವಿಕಾಸ್, ಸಬ್‌ಕಾ ವಿಶ್ವಾಸ್ ಎನ್ನುವುದು ಮಣಿಪುರ, ದೆಹಲಿ, ಉತ್ತರ ಪ್ರದೇಶ, ಬಿಹಾರ ಎಲ್ಲಿಯೂ ಪಾಲನೆಯಾಗುತ್ತಿಲ್ಲ. ಕರ್ನಾಟಕದ ಗ್ಯಾರಂಟಿಗಳನ್ನು ಟೀಕಿಸುವ ಬಿಜೆಪಿ ನಾಯಕರು, ಮಧ್ಯ ಪ್ರದೇಶ, ಮಹಾರಾಷ್ಟ್ರ, ಹರಿಯಾಣದಲ್ಲಿ ಯಾಕೆ ನೀಡಿದ್ದಾರೆ. ಅದಕ್ಕೆ ಮೋದಿ ಗ್ಯಾರಂಟಿ ಎಂದು ಹೊಸ ಹೆಸರು ಬೇರೆ ಎಂದು ವ್ಯಂಗ್ಯವಾಡಿದರು.

# ಪ್ರಜಾಪ್ರಭುತ್ವಕ್ಕೆ ಅಪಾಯ – ಸಂಸದ ಕ್ಯಾಪ್ಟನ್ ಚೌಟ




ನವದೆಹಲಿ: ಮುಸ್ಲಿಮರನ್ನು ಓಲೈಕೆ ಮಾಡುವುದಕ್ಕಾಗಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಈ ದೇಶಕ್ಕೆ ಕೊಟ್ಟಿರುವ ಸಂವಿಧಾನವನ್ನೇ ತಿದ್ದುಪಡಿ ಮಾಡಬೇಕೆಂದು ರಾಜ್ಯದ ಉಪಮುಖ್ಯಮಂತ್ರಿಯಾಗಿರುವ ಡಿ.ಕೆ. ಶಿವಕುಮಾರ್ ಹೇಳಿರುವುದು ಅತ್ಯಂತ ಖಂಡನೀಯ ಹಾಗೂ ಆತಂಕಕಾರಿ ಬೆಳವಣಿಗೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಸಂವಿಧಾನ ಬದಲಾವಣೆ ಬಗ್ಗೆ ಡಿಕೆ ಶಿವಕುಮಾರ್ ನೀಡಿರುವ ಹೇಳಿಕೆಯನ್ನು ಕಟುವಾಗಿ ವಿರೋಧಿಸಿರುವ ಕ್ಯಾ. ಚೌಟ ಅವರು, ರಾಜ್ಯದಲ್ಲಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ. 4ರಷ್ಟು ಮೀಸಲಾತಿ ವಿಧೇಯಕವನ್ನೇ ಪಾಸ್ ಮಾಡಿರುವ ಸಿದ್ದರಾಮಯ್ಯನವರ ಕಾಂಗ್ರೆಸ್ ಸರ್ಕಾರ ಇದೀಗ ಅದಕ್ಕಿಂತಲೂ ಒಂದು ಹೆಜ್ಜೆ ಮುಂದೆ ಹೋಗಿ ಮುಸ್ಲಿಮರ ವೋಟ್ ಬ್ಯಾಂಕ್ ತುಷ್ಟೀಕರಣಕ್ಕಾಗಿ ಇಡೀ ಸಂವಿಧಾನದ ಅಡಿಪಾಯವನ್ನೇ ಅಲುಗಾಡಿಸಲು ಹೊರಟಿರುವುದು ಅತ್ಯಂತ ಗಂಭೀರ ವಿಚಾರ ಎಂದರು.

# ಮೀನು ಮಾರುಕಟ್ಟೆಯಲ್ಲಿ ದಲಿತ ಮಹಿಳೆಯರಿಗೆ ತಾರತಮ್ಯ





ಮಂಗಳೂರು: ಮಂಗಳೂರು ಸಹಿತ ಹಲವಡೆ ಇರುವ ಮೀನು ಮಾರುಕಟ್ಟೆಯಲ್ಲಿ ದಲಿತ ಮಹಿಳೆಯರನ್ನು ತಾರತಮ್ಯದಿಂದ ನೋಡುವ, ಮುಖ್ಯವಾಗಿ ಚಿಪ್ಪು ಮಾರುವ ದಲಿತ ಮಹಿಳೆಯರನ್ನು ಮಾರ್ಕೆಟ್‌ನ ಮೂಲೆಯಲ್ಲಿ ಕುಳ್ಳಿರಿಸುವ ಧೋರಣೆ ಕಂಡು ಬಂದಿದ್ದು, ಜಿಲ್ಲಾಡಳಿತ ಎಚ್ಚೆತ್ತುಕೊಂಡು ಸೂಕ್ತ ಕ್ರಮ ಕೈಗೊಳ್ಳುವಂತೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ದ.ಕ. ಜಿಲ್ಲಾ ಸಂಚಾಲಕ ಗಿರೀಶ್ ಕುಮಾರ್ ಆಗ್ರಹಿಸಿದ್ದಾರೆ. ಉಡುಪಿಯ ಮಲ್ಪೆ ಬಂದರಿನಲ್ಲಿ ದಲಿತ ಮಹಿಳೆ ಮೀನು ಕದ್ದರೆಂಬ ಆರೋಪ ದಲ್ಲಿ ಆಕೆಯನ್ನು ಮರಕ್ಕೆ ಕಟ್ಟಿ ಹಲ್ಲೆ ನಡೆಸಿದ ಘಟನೆ ಖಂಡನೀಯ. ಈ ಪ್ರಕರಣಕ್ಕೆ ಸಂಬಂಧಿಸಿ ಈಗಾಗಲೇ ಪೊಲೀಸರು ಐವರು ಆರೋಪಿಗಳನ್ನು ಬಂಧಿಸಿದ್ದಾರೆ. ಆರೋಪಿಗಳಿಗೆ ಯಾವುದೇ ಕಾರಣಕ್ಕೂ ಜಾಮೀನು ನೀಡಬಾರದು. ಪ್ರಕರಣವನ್ನು ಮುಚ್ಚಿ ಹಾಕಲು ಬಿಡಬಾರದು. ಇಂತಹ ಘಟನೆ ಮಂಗಳೂರಿನಲ್ಲಿ ನಡೆಯದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಆಗ್ರಹಿಸಿದರು.

# ಶಾಸಕ ಕಾಮತ್ ರಾಜೀನಾಮೆ ನೀಡಲಿ: ಸುನಿಲ್ ಬಜಾಲ್



ಮಂಗಳೂರು: ಮಂಗಳೂರು ಮಹಾನಗರ ಪಾಲಿಕೆ ಅಸ್ತಿತ್ವಕ್ಕೆ ಬಂದು 40 ವರ್ಷಗಳು ಕಳೆದಿವೆ. ಆಡಳಿತ ನಡೆಸಿದ ಕಾಂಗ್ರೆಸ್ ಹಾಗೂ ಬಿಜೆಪಿಗೆ ಒಂದು ತುಂಡು ಭೂಮಿಯನ್ನು ಬಡವರಿಗೆ ನೀಡಲಾಗಿಲ್ಲ. ಕಳೆದ 25 ವರ್ಷಗಳಿಂದ ನಿವೇಶನರಹಿತರ ಹೋರಾಟ ನಡೆದ ಫಲವಾಗಿ ನಿವೇಶನ ರಹಿತರ ಪಟ್ಟಿ ರೆಡಿಯಾಗಿದೆ. ಒಂದೆರಡು ಕಡೆಗಳಲ್ಲಿ ಭೂಮಿ ನಿಗದಿಪಡಿಸಲಾಗಿದೆ. ಆದರೆ ಇಲ್ಲಿನ ಬಿಲ್ಡರ್ ಮಾಫಿಯಾ ಅದಕ್ಕೆ ಅವಕಾಶ ನೀಡದೆ ಬಡವರನ್ನು ಶೋಷಿಸುತ್ತಲಿದೆ. ಈ ಬಗ್ಗೆ ಧ್ವನಿ ಎತ್ತದ ಶಾಸಕ ವೇದವ್ಯಾಸ ಕಾಮತ್ ಕೂಡಲೇ ರಾಜೀನಾಮೆ ನೀಡಬೇಕು ಎಂದು ಸಿಪಿಎಂ ದ.ಕ.ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯ ಸುನಿಲ್ ಕುಮಾರ್ ಬಜಾಲ್ ಆಗ್ರಹಿಸಿದರು. ನಿವೇಶನ ರಹಿತರಿಗೆ ನಿವೇಶನ ಮಂಜೂರು ಮಾಡಲು ಒತ್ತಾಯಿಸಿ ಹಾಗೂ ಇಡ್ಯಾ ಪ್ರದೇಶದಲ್ಲಿ ಎ+3 ಮಾದರಿಯ ಯೋಜಿತ ವಸತಿ ಯೋಜನೆಯನ್ನು ಶೀಘ್ರ ಪೂರ್ಣಗೊಳಿಸಲು ಒತ್ತಾಯಿಸಿ ಸಿಪಿಎಂ ಮಂಗಳೂರು ಕಚೇರಿಯ ಮುಂದೆ ನಡೆದ ಪ್ರತಿಭಟನೆಯನ್ನು ಮಾತನಾಡಿದರು.

# ಉಡುಪಿ ಜಿಲ್ಲೆಯಾದ್ಯಂತ ತಂಪೆರೆದ ಗಾಳಿ ಮಳೆ



ಉಡುಪಿ : ಉಡುಪಿ ಜಿಲ್ಲೆಯಾದ್ಯಂತ ಗುಡುಗು ಸಹಿತ ಗಾಳಿ ಮಳೆಯಾಗಿರುವ ಬಗ್ಗೆ ವರದಿಯಾಗಿದೆ. ಆ ಮೂಲಕ ಎಲ್ಲೆಡೆ ತಂಪಿನ ವಾತಾವರಣ ಕಂಡುಬಂದಿದೆ. ಉಡುಪಿ ಜಿಲ್ಲೆಯಲ್ಲಿ ಉರಿ ಬಿಸಿಲು ಸೆಕೆಯ ವಾತಾವರಣ ಇದ್ದು, ಕೆಲವು ಕಡೆ ಬೆಳಗ್ಗೆ ಮಂಜು, ಮೋಡದಿಂದ ಕೂಡಿತ್ತು. ಇದರಿಂದಾಗಿ ತಾಪಮಾನದಲ್ಲೂ ಏರಿಳಿತವಾಗುತ್ತಿದ್ದು, ಇದೀಗ ಕಾರ್ಕಳದ ಹಲವೆಡೆ ಗಾಳಿ ಸಹಿತ ಧಾರಾಕಾರ ಮಳೆಯಾಗಿದೆ. ಗಾಳಿಯ ರಭಸಕ್ಕೆ ಹಲವು ಕಡೆ ಮರಗಳು ರಸ್ತೆಗೆ ಉರುಳಿ ಬಿದ್ದಿದು ವಾಹನ ಸಂಚಾರಕ್ಕೆ ಅಡ್ಡಿಯಾಗಿರುವುದು ತಿಳಿದು ಬಂದಿದೆ. ಕಾರ್ಕಳದ ಕೆಲವು ಕಡೆ ಅಂಗಡಿ ಹಾಗೂ ಮನೆಯ ಮೇಲ್ಛಾವಣಿ ಹಾರಿಹೋಗಿದೆ ಕಾರ್ಕಳ ಪೇಟೆ ಭಾಗ, ಕುಕ್ಕುಂದೂರು, ಮಿಯ್ಯಾರು, ರೆಂಜಾಲ, ಬಜಗೋಳಿ, ದಿಡಿಂಬಿರಿ, ಮಾಳ, ನೆಲ್ಲಿಕಾರು, ಕೆರ್ವಾಶೆಯಲ್ಲಿ ಉತ್ತಮ ಮಳೆಯಾಗಿದೆ. ಕೆಲವು ಕಡೆ ಗುಡುಗು ಸಹಿತ ಮಳೆಯಾಗಿರುವ ಬಗ್ಗೆ ವರದಿಯಾಗಿದೆ.

# ಎಪ್ರಿಲ್, ಮೇ ತಿಂಗಳಲ್ಲಿ ಎಚ್ಚರ ವಹಿಸಿ : ಡಿಸಿ ವಿದ್ಯಾಕುಮಾರಿ



ಉಡುಪಿ : ಈ ಸಲದ ಬೇಸಿಗೆಯ ಮಾರ್ಚ್ ತಿಂಗಳಿನಲ್ಲಿಯೇ ಜಿಲ್ಲೆಯಲ್ಲಿ 39 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಕಂಡುಬಂದಿದ್ದು, ಮುಂಬರುವ ಎಪ್ರಿಲ್ ಹಾಗೂ ಮೇ ತಿಂಗಳಲ್ಲಿ ಉಷ್ಣಾಂಶವು ಮತ್ತಷ್ಟು ಹೆಚ್ಚುವ ಎಲ್ಲಾ ಸಾಧ್ಯತೆಗಳಿವೆ. ಇದರಿಂದಾಗಿ ಬಿಸಿಗಾಳಿ ಶಾಖ (ಹೀಟ್‌ವೇವ್ ಸ್ಟ್ರೋಕ್) ದಿಂದ ಮನುಷ್ಯನ ದೇಹದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಗಳಿವೆ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ಜಿಲ್ಲೆಯ ಜನತೆಗೆ ಜಾಗೃತಿಯ ಸಂದೇಶ ನೀಡಿದ್ದಾರೆ. ಜನತೆಗೆ ಹೆಚ್ಚು ಹೆಚ್ಚು ನೀರು ಸೇವನೆ, ವಿಶ್ರಾಂತಿ, ಚಟುವಟಿಕೆಗಳ ಅವಧಿ ಬದಲಾವಣೆ ಸೇರಿದಂತೆ ವಿವಿಧ ಮುಂಜಾ ಗ್ರತಾ ಕ್ರಮಗಳ ಬಗ್ಗೆ ಮಾಹಿತಿ ನೀಡಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

# ಜೀವನ ಶಿಕ್ಷಣ ನೀಡುತ್ತಿರುವ ಶಾಲೆ ರಾಜ್ಯಕ್ಕೆ ಮಾದರಿ



ಕುತ್ಲೂರು: ಕುತ್ಲೂರಿನಲ್ಲಿ ಶಾಲಾ ಪಠ್ಯದ ಜೊತೆ ಪರಿಸರದ ಜೊತೆ ಬದುಕುವ ಜೀವನ ಶಿಕ್ಷಣ ನೀಡುತ್ತಿರುವ ಶಾಲೆ ರಾಜ್ಯಕ್ಕೆ ಮಾದರಿ ಎಂದು ಕರ್ನಾಟಕ ರಾಜ್ಯದ ಮುಖ್ಯ ಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ತಿಳಿಸಿದ್ದಾರೆ. ಅವರು ದಕ್ಷಿಣ ಕನ್ನಡ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘ, ಬೆಳ್ತಂಗಡಿ ತಾಲೂಕು ಪತ್ರಕರ್ತರ ಸಂಘದ ಸಹಭಾಗಿತ್ವದಲ್ಲಿ ಪತ್ರಕರ್ತರು ಗ್ರಾಮ ವಾಸ್ತವ್ಯ ಮಾಡಿದ ಕುತ್ಲೂರು ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮರಳಿ ಸರಕಾರಿ ಶಾಲೆಗೆ ಮಕ್ಕಳನ್ನು ಸೇರಿಸೋಣ ಅಭಿಯಾನ ಹಾಗೂ ಮಕ್ಕಳು ಮತ್ತು ಶಿಕ್ಷಕರು ಶಾಲಾಭಿವೃದ್ಧಿ ಸಮಿತಿಯ ಪದಾಧಿಕಾರಿಗಳ ಜೊತೆ ಸಂವಾದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡುತ್ತಾ, ಕುತ್ಲೂರಿನಲ್ಲಿ ಶಾಲೆ ವಿಶ್ವವಿದ್ಯಾನಿಲಯದ ರೀತಿ ಕಾರ್ಯ ನಿರ್ವ ಹಿಸುತ್ತಿದೆ. ಸಮಾಜದಿಂದ ಏನು ಪಡೆದಿದ್ದೇನೆ ಎನ್ನುವ ಬದಲು ಸಮಾಜಕ್ಕೆ ಏನು ಮಾಡ ಬೇಕು ಎನ್ನುವುದು ಮುಖ್ಯ ಎಂದರು. ತಾನು ಸರಕಾರಿ ಶಾಲೆಯಲ್ಲಿ ಓದಿ ಇಂದು ಸಮಾಜದಲ್ಲಿ ಸ್ಥಾನ ಮಾನ ಪಡೆದಿದ್ದೇನೆ. ಅದೇ ರೀತಿ ಕುತ್ಲೂರು ಶಾಲೆಯ ಅಭಿವೃದ್ಧಿಗೆ ಶಾಲೆಯವರು ಸಲ್ಲಿಸಿದ ಮನವಿಯ ಪ್ರಕಾರ ನನ್ನಿಂದಾಗುವ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಕೆ.ವಿ.ಪ್ರಭಾಕರ್ ತಿಳಿಸಿದ್ದಾರೆ.

# ಕೇರಳ ರೈಲ್ವೆ ಹೋರಾಟ ಸಮಿತಿಯಿಂದ ಅಶೋಕ್ ರೈ ಭೇಟಿ




ದಕ್ಷಿಣ ಕನ್ನಡ: ಕಾಂಞಂಗಾಡ್–ಕಾಣಿಯೂರು ರೈಲ್ವೇ ಮಾರ್ಗ ನಿರ್ಮಾಣದ ಸಲುವಾಗಿ ಕರ್ನಾಟಕ ಮುಖ್ಯಮಂತ್ರಿಗಳ ಜೊತೆಗೆ ಮಾತನಾಡುವಂತೆ ಪುತ್ತೂರು ಶಾಸಕ ಅಶೋಕ್ ರೈ ಅವರನ್ನು ಕೇರಳ ನಿಯೋಗವೊಂದು ಭೇಟಿಯಾಗಿ ಮನವಿ ಸಲ್ಲಿಸಿದೆ. ಕೇರಳದ ಕಾಂಞಂಗಾಡ್‌ನಿಂದ ಕರ್ನಾಟಕದ ಕಾಣಿಯೂರು ಎಂಬಲ್ಲಿಗೆ ಸಂಪರ್ಕ ಕಲ್ಪಿಸುವ ಹೊಸ ರೈಲ್ವೇ ಮಾರ್ಗ ಯೋಜನೆಯು ಅಂದಿನಿಂದ ಇಂದಿನತನಕ ಅಭಿವೃದ್ಧಿ ಕಾಣದೆ ನೆನೆಗುದಿಗೆ ಬಿದ್ದಿದೆ. ಈ ವಿಚಾರದಲ್ಲಿ ಕರ್ನಾಟಕ ಸರಕಾರದ ಜೊತೆ ಮಾತುಕತೆ ನಡೆಸುವ ಉದ್ದೇಶದಿಂದ ರೈಲ್ವೇ ಹೋರಾಟ ಸಮಿತಿ ನಿಯೋಗವೊಂದು ಪುತ್ತೂರು ಶಾಸಕರಾದ ಅಶೋಕ್ ರೈ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಈ ವಿಚಾರದಲ್ಲಿ ಚರ್ಚೆ ನಡೆಸುವ ಸಲುವಾಗಿ ಶಾಸಕರಿಗೆ ಮನವಿ ಸಲ್ಲಿಸಿದರು. ಕಾಮಗಾರಿಗೆ ಡಿಪಿಆರ್ ಸಿದ್ದಪಡಿಸಿ ಆ ಬಳಿಕ ಕೇಂದ್ರ ಸರಕಾರ 1350 ಕೋಟಿ ರೂ. ಯೋಜನೆಯನ್ನು ಸಿದ್ದಪಡಿಸಬೇಕಿದೆ. ಇದರಲ್ಲಿ 650 ಕೋಟಿ ರೂ. ಕೇರಳ ಮತ್ತು ಕರ್ನಾಟಕ ರಾಜ್ಯ 50–50 ಅನುದಾನವನ್ನು ನೀಡಬೇಕಿದೆ.

# ಹಲ್ಲೆ ಪ್ರಕರಣ ಹಿಂಪಡೆಯಲು ಮಹಿಳೆಯಿಂದ ಜಿಲ್ಲಾಧಿಕಾರಿಗೆ ಮನವಿ



ಉಡುಪಿ : ಮಲ್ಪೆ ಬಂದರಿನಲ್ಲಿ ಮೀನು ಕದ್ದ ಆರೋಪ ಸಂಬಂಧ ಮರಕ್ಕೆ ಕಟ್ಟಿ ಹಲ್ಲೆ ನಡೆಸಿರುವ ಘಟನೆ ಸಂಬಂಧ ಆರೋಪಿಗಳ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ವಾಪಸ್ ಪಡೆಯುವಂತೆ ಹಲ್ಲೆಗೊಳಗಾದ ಸಂತ್ರಸ್ತ ಮಹಿಳೆಯು ಜಿಲ್ಲಾಧಿಕಾರಿಗೆ ಮನವಿ ಮಾಡಿದ್ದಾರೆ. ತಮ್ಮ ಸಮುದಾಯದ ಜನರ ಜೊತೆ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಹಲ್ಲೆಗೊಳಗಾದ ಮಹಿಳೆಯು, ರಾಜಿ ಮಾಡಿಕೊಂಡಿದ್ದೇವೆ. ಈ ಪ್ರಕರಣ ಹಿಂಪಡೆಯಿರಿ ಎಂದು ಉಡುಪಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು. ಮೀನು ಕದ್ದ ಸಂಬಂಧ ಅದೇ ದಿನ ರಾತ್ರಿ ರಾಜಿ ಮಾಡಿಕೊಂಡಿದ್ದೆವು. ಮರುದಿನ ಅವರು ಫೋನ್ ಮಾಡಿದರು. ಆದರೆ ನಮ್ಮ ಮನೆಯಲ್ಲಿ ಯಾರೂ ಇಲ್ಲದ ಕಾರಣ ನಾನು ಠಾಣೆಗೆ ಹೋಗಲಿಲ್ಲ. ಆಗ ಅವರೇ ಆಟೋರಿಕ್ಷಾ ಮಾಡಿಕೊಂಡು ಬಂದು ನನ್ನನ್ನು ಕರೆದುಕೊಂಡು ಹೋಗಿ ನಿನ್ನೆ ರಾಜಿಯಾಗಿದ್ದಕ್ಕೆ ಹೆಬ್ಬೆಟ್ಟು ಹಾಕು ಅಂದರು. ಅದಕ್ಕೆ ಹೆಬ್ಬೆಟ್ಟು ಹಾಕಿದ್ದೆ. ನನಗೆ ಓದಲು ಬರಲ್ಲ. ಮುಂದೆ ಏನಾಗಿದೆ ಅಂತಾ ನನಗೆ ಗೊತ್ತಿಲ್ಲ ಎಂದು ಮಹಿಳೆ ಲಕ್ಷ್ಮೀ ಬಾಯಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದಾರೆ.

# ಪುತ್ತೂರ ಒಡೆಯನಿಗೆ ಜಾತ್ರಾ ಸಂಭ್ರಮ : ಚಪ್ಪರ ಮುಹೂರ್ತ



ಪುತ್ತೂರು: ಇಲ್ಲಿನ ಮಹಾಲಿಂಗೇಶ್ವರ ದೇವಸ್ಥಾನದಲ್ಲಿ ಏ.1ರಿಂದ 22ರವರೆಗೆ ನಡೆಯುವ ವಾರ್ಷಿಕ ಜಾತ್ರೋತ್ಸವದ ಸಂದರ್ಭದಲ್ಲಿ ಭಕ್ತರಿಗೆ ಅನ್ನದಾನ ಮಾಡಲು ತಾತ್ಕಾಲಿಕ ಚಪ್ಪರಕ್ಕೆ ಮುಹೂರ್ತ ನೆರವೇರಿಸಲಾಯಿತು. ದೇವಳದ ಕೆರೆಯ ಬಳಿ 20 ಸಾವಿರ ಚದರ ಅಡಿಯ ಚಪ್ಪರ ನಿರ್ಮಿಸಿ ಅನ್ನಪ್ರಸಾದ ವಿತರಿಸಲು ದೇವಳದ ವ್ಯವಸ್ಥಾಪನಾ ಸಮಿತಿ ತೀರ್ಮಾನಿಸಿದ್ದು, ದೇವಾಲಯದಲ್ಲಿ ಬೆಳಿಗ್ಗೆ ಪೂಜೆ, ನಿತ್ಯ ಬಲಿಯ ಬಳಿಕ ದೇವಳದ ಕೆರೆಯ ನೈರುತ್ಯ ಭಾಗದಲ್ಲಿ ಚಪ್ಪರ ಮುಹೂರ್ತ ನಡೆಯಿತು. ದೇವಳದ ಪ್ರಧಾನ ಅರ್ಚಕ ವಸಂತ ಕೆದಿಲಾಯ ಪೂಜಾ ವಿಧಿ–ವಿಧಾನ ನೆರವೇರಿಸಿದರು. ದೇವಾಲಯದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಈಶ್ವರ ಭಟ್ ಪಂಜಿಗುಡ್ಡೆ, ಸಮಿತಿ ಸದಸ್ಯರಾದ ಮಹಾಬಲ ರೈ ವಳತ್ತಡ್ಕ, ವಿನಯ ಸುವರ್ಣ, ಈಶ್ವರ ಬೇಡೆಕರ್, ಸುಭಾಶ್ ರೈ ಬೆಳ್ಳಿಪ್ಪಾಡಿ, ಕೃಷ್ಣವೇಣಿ ಅವರು ಚಪ್ಪರ ಮುಹೂರ್ತ ನೆರವೇರಿಸಿದರು.

# ಮನೆಯ ಹೆಣ್ಣುಮಕ್ಕಳು ಸಶಕ್ತರಾಗಬೇಕು–ಮುಲ್ಲೈ ಮುಗಿಲನ್



ಮಂಗಳೂರು: ಮೊದಲು ಮನೆಗಳು ಬದಲಾವಣೆಯಾಗಬೇಕು ನಂತರ ಮನಗಳು ಬದಲಾವಣೆಯಾಗುತ್ತದೆ. ಮನೆಗಳಲ್ಲಿ ಬದಲಾವಣೆ ಆಗಬೇಕಾದರೆ. ಮಹಿಳೆಯರನ್ನು ಸಶಕ್ತಗೊಳಿಸುವ ಕೆಲಸ ನವೋದಯ ಗ್ರಾಮ ವಿಕಾಸ ಚಾರಿಟೇಬಲ್ ಟ್ರಸ್ಟ್ ಮುಂದೆಯೂ ಮಾಡುವ ಮುಖಾಂತರ ದೇಶದಲ್ಲಿ ಹೆಸರು ಮಾಡಲಿ" ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಹೇಳಿದರು. ಅವರು ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್ ವತಿಯಿಂದ ನವೋದಯ ಸ್ವಸಹಾಯ ಗುಂಪುಗಳ ಸದಸ್ಯೆಯರಿಗೆ ಸಮವಸ್ತ್ರ ವಿತರಣಾ ಸಮಾರಂಭ ಕಾರ್ಯಕ್ರಮ ಉದ್ಘಾಟಿಸಿ ಮಾತಾಡಿ, ಇಂದಿನ ಬೆಳವಣಿಗೆಗೆ ತಕ್ಕಂತೆ ಬದಲಾವಣೆಗೊಂಡು ಗ್ರಾಹಕ ಸ್ನೇಹಿಯಾಗಿರುವ ಎಸ್‌ಸಿಡಿಸಿಸಿ ಬ್ಯಾಂಕ್ ದೇಶಕ್ಕೆ ಮಾದರಿ ಎಂದರು.

# ನಾನು ಹಾಕಿದ್ದ ಬೀಜ ಮೊಳಕೆ ಒಡೆಯಲಾರಂಭಿಸಿದೆ–ಶಕುಂತಳಾ ಶೆಟ್ಟಿ



ಪುತ್ತೂರು: ನಗರದಲ್ಲಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ಸಂಬಂಧಿಸಿ ಈ ಬಾರಿಯ ಬಜೆಟ್‌ನಲ್ಲಿ ಪ್ರಸ್ತಾವನೆ ಆಗಿದೆ. ನಾನು ಶಾಸಕಿಯಾಗಿದ್ದ ಅವಧಿಯಲ್ಲಿ ಹಾಕಿದ ಬೀಜ ಇಂದು ಮೊಳಕೆ ಒಡೆಯಲಾರಂಭಿಸಿದೆ. ಬಜೆಟ್‌ನಲ್ಲಿ ಒಂದು ಬಾರಿ ಪ್ರಸ್ತಾಪವಾದರೆ ಅದು ಜಾರಿಯಾಗುತ್ತದೆ. ಮೆಡಿಕಲ್ ಕಾಲೇಜು ನಿರ್ಮಾಣವಾಗುವಾಗ ಪುತ್ತೂರು ಇನ್ನಷ್ಟು ಅಭಿವೃದ್ಧಿಯಾಗುತ್ತದೆ, ಆರಂಭದಲ್ಲಿ ಪುತ್ತೂರಿನಲ್ಲಿ ಮೆಡಿಕಲ್ ಕಾಲೇಜಿಗಿಂತಲೂ ಪುತ್ತೂರು ಜಿಲ್ಲೆ ಆಗಬೇಕೆಂಬ ಹೋರಾಟ ನಡೆಯುತ್ತಿತ್ತು. ಆಗ ನಾನೂ ಜಿಲ್ಲೆ ಆಗಬೇಕೆಂದು ಹೋರಾಟಕ್ಕೆ ಇಳಿದಿದ್ದೆ. ಆ ಸಂದರ್ಭದಲ್ಲಿ ಪ್ರಥಮ ಬಾರಿಗೆ ಸಿದ್ದರಾಮಯ್ಯ ಅವರು ಎಲ್ಲ ಜಿಲ್ಲೆಗಳಿಗೂ ಮೆಡಿಕಲ್ ಕಾಲೇಜು ಸ್ಥಾಪಿಸುವ ಕುರಿತು ಬಜೆಟ್‌ನಲ್ಲಿ ಪ್ರಸ್ತಾಪಿಸಿದ್ದರು. ಆಗ ನಾನು ಜಿಲ್ಲೆಯ ಬದಲು ಮೆಡಿಕಲ್ ಕಾಲೇಜು ಪುತ್ತೂರಿಗೆ ನೀಡುವ ಕುರಿತು ಮುಖ್ಯಮಂತ್ರಿಯಲ್ಲಿ ಬೇಡಿಕೆಯಿಟ್ಟಿದ್ದೆ. ಎಂದು ಮಾಜಿಶಾಸಕಿ ಶಕುಂತಳಾ ಟಿ.ಶೆಟ್ಟಿ ಹೇಳಿದ್ದಾರೆ.

# ಸುದ್ದಿ ತುಣುಕು

ಬಿಬಿಎಂಪಿಯನ್ನು ವಿಭಜಿಸುವ ಗ್ರೇಟರ್ ಬೆಂಗಳೂರು ಸೇರಿದಂತೆ ಏಳು ವಿಧೇಯಕಗಳನ್ನು ವಾಪಸ್ ಕಳುಹಿಸಿರುವ ರಾಜ್ಯಪಾಲರು ಸ್ಪಷ್ಟೀಕರಣ ಕೇಳಿದ್ದಾರೆ.

ತಂದೆಯ ಸಾವಿನ ದಿನ ಪರೀಕ್ಷೆ ಬರೆದ ನವಲಗುಂದದ ಶಬಾನಾ ಪಠಾಸು ಅವರ ಮನೆಗೆ ಶಾಸಕ ಎನ್ ಹೆಚ್ ಕೋನರಡ್ಡಿ, ಜಿಲ್ಲಾಧಿಕಾರಿ ದಿವ್ಯ ಪ್ರಭು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭೇಟಿ ನೀಡಿ ಸಾಂತ್ವನ ಹೇಳಿದರು.

ಹಾಸನ ಜಿಲ್ಲೆಯ ರೈತರು ಬೆಳೆದಿರುವ ಹಸಿ ಮೆಣಸಿನಕಾಯಿಗೆ ಹೊರರಾಜ್ಯದಿಂದ ಭಾರೀ ಬೇಡಿಕೆ ಬರುತ್ತಿರುವುದರಿಂದ ಪ್ರತಿನಿತ್ಯ ಜಿಲ್ಲೆಯಿಂದ 500 ಚೀಲಗಳಷ್ಟು ಲಾರಿಗಳ ಮೂಲಕ ರಾಜ್ಯ ಮತ್ತು ಹೊರ ರಾಜ್ಯಗಳಿಗೆ ರಫ್ತು ಮಾಡಲಾಗುತ್ತಿದೆ.

ಬಿಜೆಪಿಯಿಂದ ಉಚ್ಚಾಟನೆ ಮಾಡಿರುವುದಕ್ಕೆ ಬಸನಗೌಡ ಪಾಟೀಲ್ ಯತ್ನಾಳ್ ಬೇಸರ ವ್ಯಕ್ತಪಡಿಸಿದ್ದಾರೆ. ಹೊಂದಾಣಿಕೆ ರಾಜಕಾರಣದ ಹರಿಕಾರರಿಂದ ಪಕ್ಷ ಲೋಕಸಭಾ ಚುನಾವಣೆಯಲ್ಲಿ ಮಕಾಡೆ ಮಲಗಲು ಕಾರಣವಾಯಿತು ಎಂದಿದ್ದಾರೆ.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಇಲ್ಲಿಯವರೆಗೆ ಹಾವೇರಿಯಲ್ಲಿ 37ಕ್ಕೂ ಅಧಿಕ ಕೆರೆಗಳ ಹೂಳೆತ್ತಿ ಅಭಿವೃದ್ಧಿ ಮಾಡಲಾಗಿದೆ.

ಬಿಜೆಪಿಯಲ್ಲಿ ಜಿಲೇಬಿ ತಿನ್ನುವವರು ತಿನ್ನುತ್ತಲೇ ಇದ್ದಾರೆ. ಜೈಲಿಗೆ ಹೋಗುವವರು ಹೋಗುತ್ತಲೇ ಇದ್ದಾರೆ ಎಂದು ಶಾಸಕ ಶಿವರಾಮ್ ಹೆಬ್ಬಾರ್ ಅಸಮಾಧಾನ ವ್ಯಕ್ತಪಡಿಸಿದರು.

ಸಹಕಾರ ಸಂಘಗಳು ಸಹಕಾರ ಕಾಯಿದೆ ಮತ್ತು ಅದರಡಿ ರಚಿಸಿರುವ ನಿಯಮಗಳನ್ನು ಪಾಲನೆ ಮಾಡುವ ಕುರಿತು ಪರಿಶೀಲನೆ ನಡೆಸಲು ಪೋರ್ಟಲ್ ರಚಿಸುವಂತೆ ಹೈಕೋರ್ಟ್ ಸರ್ಕಾರಕ್ಕೆ ಸೂಚನೆ ನೀಡಿದೆ.

ಕಳೆದ ವರ್ಷದ ಬೇಸಿಗೆಯಲ್ಲಿ ನೀರಿಲ್ಲದೆ ಬೆಂಗಳೂರಿನ ಮಂದಿ ಪರದಾಡಿದ್ದು, ಈ ಬಾರಿ ಮತ್ತೆ ಅಂಥ ಸಂದರ್ಭ ಬರಬಾರದೆಂದು ಈಗಲೇ ಬೆಂಗಳೂರು ಜಲಮಂಡಳಿ ನೀರು ಉಳಿತಾಯಕ್ಕೆ ಅಭಿಯಾನ ಹಮ್ಮಿಕೊಂಡಿದೆ.

ಚಾಮರಾಜನಗರ ಆಕ್ಸಿಜನ್ ದುರಂತದ ಮರು ತನಿಖೆಯ ಜವಾಬ್ದಾರಿಯನ್ನು ನ್ಯಾ.ಕುನ್ಹಾ ಅವರಿಗೆ ನೀಡಲಾಗಿದೆ ಎಂದು ಡಿಸಿಎಂ ಡಿಕೆಶಿ ಮಾಹಿತಿ ನೀಡಿದರು.

ಯುಗಾದಿ ಮತ್ತು ರಂಜಾನ್ ಹಬ್ಬದ ಅಂಗವಾಗಿ ಪ್ರಯಾಣಿಕರ ಅನುಕೂಲಕ್ಕಾಗಿ ರಾಜ್ಯ ಸಾರಿಗೆ ಸಂಸ್ಥೆ 2000 ವಿಶೇಷ ಹೆಚ್ಚುವರಿ ಬಸ್ ಸಂಚಾರ ಸೌಲಭ್ಯ ಕಲ್ಪಿಸಿದೆ.

ಕೋವಿಡ್ ಅಕ್ರಮ ಸಂಬಂಧ ಮೈಕೆಲ್ ಡಿಕುನ್ಹಾ ಆಯೋಗದ ವರದಿ ಅಧ್ಯಯನಕ್ಕೆ ಮತ್ತೊಂದು ಸಮಿತಿ ರಚಿಸಲು ಸಂಪುಟ ಉಪಸಮಿತಿ ಸಭೆ ತೀರ್ಮಾನಿಸಿದೆ.

ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರ ಉಚ್ಚಾಟನೆ ಹಿಂಪಡೆಯಬೇಕೆಂದು ಕೂಡಲ ಸಂಗಮದ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಒತ್ತಾಯಿಸಿದ್ದಾರೆ.

ಕರ್ನಾಟಕದಲ್ಲಿ ಕೇಳಿಬಂದ ಹನಿಟ್ರ್ಯಾಪ್ ಆರೋಪದ ಕುರಿತು ತನಿಖೆ ನಡೆಸಲು ಕೋರಿ ಸಾಮಾಜಿಕ ಕಾರ್ಯಕರ್ತ ಬಿನಯ್ ಕುಮಾರ್ ಸಿಂಗ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾ ಮಾಡಿದೆ.

# ಪಾಲಾಕ್ ರೈಸ್



**ಬೇಕಾಗುವ ಪದಾರ್ಥಗಳು :**

ಅನ್ನ – 2 ಕಪ್
ಪಾಲಾಕ್ ಸೊಪ್ಪು – 1ಕಪ್
ಈರುಳ್ಳಿ – 1
ಹಸಿ ಮೆಣಸಿನಕಾಯಿ – 3–4
ಚಕ್ಕೆ – ಸ್ವಲ್ಪ
ಕರಿಮೆಣಸು – 3–4
ಸಾಸಿವೆ – 1 ಚಮಚ
ಜೀರಿಗೆ – 1 ಚಮಚ
ಲವಂಗ – 2
ಗೋಡಂಬಿ – 1/2 ಕಪ್
ಉಪ್ಪು – ರುಚಿಗೆ ತಕ್ಕಷ್ಟು
ಎಣ್ಣೆ – 2 – 3 ಚಮಚ
ನಿಂಬೆಹಣ್ಣು – 1

**ಮಾಡುವ ವಿಧಾನ :**

ಮೊದಲಿಗೆ ಬಾಣಲೆಯಲ್ಲಿ ಎಣ್ಣೆ ಹಾಕಿ ಕಾಯಿಸಿ ಅದಕ್ಕೆ ಸಾಸಿವೆ, ಜೀರಿಗೆ, ಮೆಣಸಿನ ಕಾಯಿ, ಕತ್ತರಿಸಿದ ಈರುಳ್ಳಿ ಹಾಕಿ ಕೆಲವು ನಿಮಿಷ ಹುರಿಯಬೇಕು. ನಂತರ ಕತ್ತರಿಸಿಕೊಂಡ ಸಣ್ಣದಾಗಿ ಕತ್ತರಿಸಿದ ಪಾಲಾಕ್ ಸೊಪ್ಪನ್ನು ಹಾಕಿ ಹುರಿಯಬೇಕು. ನಂತರ ಇದಕ್ಕೆ 1/2 ಕಪ್ ನೀರು ಹಾಕಿ ಕುದಿಯುವವರೆಗೂ ಸಣ್ಣ ಉರಿಯಲ್ಲಿಡಬೇಕು. ನಂತರ ಲವಂಗ, ಚಕ್ಕೆ, ಕರಿಮೆಣಸು ಮತ್ತು ಗೋಡಂಬಿಯನ್ನು ನುಣ್ಣಗೆ ರುಬ್ಬಿಕೊಂಡು ಇನ್ನೊಂದು ಬಾಣಲೆಯಲ್ಲಿ ಬಾಣಲೆಯಲ್ಲಿ ಎಣ್ಣೆಗೆ ಹಾಕಿ ಹುರಿದುಕೊಳ್ಳಬೇಕು. ನಂತರ ಬೇಯಿಸಿದ ಪಾಲಾಕ್ ಮಿಶ್ರಣದೊಂದಿಗೆ ರುಬ್ಬಿದ ಮಿಶ್ರಣವನ್ನು ಬೆರೆಸಿ ಅಗತ್ಯವಿದ್ದರೆ ಉಪ್ಪು ಬೆರೆಸಿ ಚೆನ್ನಾಗಿ ತಿರುಗಿಸಿ ತಣ್ಣಗಾಗಲು ಬಿಡಬೇಕು. ಈಗ ತಣ್ಣಗಾದ ಪಾಲಾಕ್ ಮಸಾಲೆಯೊಂದಿಗೆ ಅನ್ನ ಬೆರೆಸಿ ನಿಂಬೆರಸವನ್ನು ಬೆರೆಸಿ ಚೆನ್ನಾಗಿ ಕಲೆಸಿಕೊಂಡರೆ ರುಚಿಕರವಾದ ಪಾಲಾಕ್ ರೈಸ್ ಸವಿಯಲು ಸಿದ್ದ.

# ಶಿಕ್ಷೆಗೊಳಗಾದ ವ್ಯಕ್ತಿಗೆ ಪರಿಹಾರಕ್ಕೆ ಆದೇಶಿಸಿದ ಜಪಾನ್ ಕೋರ್ಟ್!



ಜಪಾನ್: ಕೊಲೆ ಪ್ರಕರಣದಲ್ಲಿ ತಪ್ಪಾಗಿ ಶಿಕ್ಷೆಗೊಳಗಾದ ಜಪಾನಿನ ವ್ಯಕ್ತಿಗೆ 1.4 ಮಿಲಿಯನ್ ಡಾಲರ್ (ಸುಮಾರು 11.98 ಕೋಟಿ ರೂ) ಪರಿಹಾರ ನೀಡಲಾಗಿದೆ ಎಂದು ಅಧಿಕಾರಿಯೊಬ್ಬರು ಮಂಗಳವಾರ ತಿಳಿಸಿದ್ದಾರೆ. ಇವಾವೊ ಹಕಾಮಡಾ ಎಂಬುವರೇ ಇಷ್ಟೊಂದು ದೊಡ್ಡ ಮೊತ್ತದ ಪರಿಹಾರ ಪಡೆದ ವ್ಯಕ್ತಿಯಾಗಿದ್ದಾರೆ. 1966ರಲ್ಲಿ ನಡೆದ ನಾಲ್ವರ ಕೊಲೆ ಪ್ರಕರಣದಲ್ಲಿ ಹಕಾಮಡಾ ಅವರಿಗೆ ಮರಣ ದಂಡನೆ ಶಿಕ್ಷೆ ವಿಧಿಸಲಾಗಿತ್ತು. ಸದ್ಯ 89 ವರ್ಷ ವಯಸ್ಸಿನ ಮಾಜಿ ಬಾಕ್ಸರ್ ಹಕಾಮಡಾ ಸುಮಾರು ನಾಲ್ಕು ದಶಕ ಜೈಲಿನಲ್ಲಿ ಕಳೆದಿದ್ದಾರೆ.

# ಹಮಾಸ್ ನಾಯಕ ಇಸ್ರೇಲ್ ದಾಳಿಯಲ್ಲಿ ಸಾವು

ಜೆರುಸಲೇಂ: ಗಾಜಾದ ಖಾನ್ ಯೂನಿಸ್‌ನಲ್ಲಿ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಹಮಾಸ್ ರಾಜಕೀಯ ನಾಯಕ ಸಲಾಹ್ ಅಲ್-ಬರ್ದವೀಲ್ ಕೊಲ್ಲಲ್ಪಟ್ಟಿದ್ದಾರೆ. ಈ ದಾಳಿಯಲ್ಲಿ ಸಲಾಹ್ ಅಲ್ – ಬರ್ದವೀಲ್ ಅವರ ಪತ್ನಿ ಕೂಡ ಸಾವನ್ನಪ್ಪಿದ್ದಾರೆ ಎಂದು ಹಮಾಸ್ ಪರ ಮಾಧ್ಯಮಗಳನ್ನು ಉಲ್ಲೇಖಿಸಿ ಟೈಮ್ಸ್ ಆಫ್ ಇಸ್ರೇಲ್ ಮಾಧ್ಯಮ ವರದಿ ಮಾಡಿದೆ. ಈ ದಾಳಿಯು ಗಾಜಾ ಪಟ್ಟಿಯಾದ್ಯಂತ ಹಮಾಸ್ ಭದ್ರಕೋಟೆಗಳ ಮೇಲೆ



ಇಸ್ರೇಲ್ ನಡೆಸಿದ ವ್ಯಾಪಕ ಮಿಲಿಟರಿ ಕಾರ್ಯಾಚರಣೆಯ ಭಾಗವಾಗಿತ್ತು.

# ಇಂಡೋನೇಷ್ಯಾದ ಜ್ವಾಲಾಮುಖಿ ಸ್ಫೋಟ



ಜಕಾರ್ತಾ: ಇಂಡೋನೇಷ್ಯಾದ ದಕ್ಷಿಣ – ಮಧ್ಯ ಭಾಗದಲ್ಲಿರುವ ಮೌಂಟ್ ಲೆವೊಟೊಬಿ ಲಾಕಿ ಲಾಕಿ ಜ್ವಾಲಾಮುಖಿ ಶುಕ್ರವಾರ ಮೂರು ಬಾರಿ ಸ್ಫೋಟಗೊಂಡಿದ್ದು, ಆಕಾಶದಲ್ಲಿ 8,000 ಮೀಟರ್ ಎತ್ತರದವರೆಗೆ ಬೂದಿಯ ಹೊಗೆ ಚಿಮ್ಮಿದೆ. ಪೂರ್ವ ನುಸಾ ತೆಂಗರಾ ಪ್ರಾಂತ್ಯದ ದೂರದ ದ್ವೀಪ ಫ್ಲೋರೆಸ್‌ನಲ್ಲಿರುವ ಜ್ವಾಲಾಮುಖಿಯಲ್ಲಿ ನೂರಾರು ಭೂಕಂಪಗಳು ಸಂಭವಿಸಿವೆ ಮತ್ತು ಕಳೆದ 7ದಿನಗಳಲ್ಲಿ ಸಕ್ರಿಯ ಜ್ವಾಲಾಮುಖಿ ಚಟುವಟಿಕೆ ಹೆಚ್ಚಾಗಿದೆ.

# ಹಮಾಸ್ ವಿರುದ್ಧ ಪ್ರತಿಭಟನೆಗಿಳಿದ ಪ್ಯಾಲೆಸ್ಟೈನಿಯನ್ನರು

ಟೆಲ್ ಅವಿವ್: ಇಸ್ರೇಲ್ ಮತ್ತು ಹಮಾಸ್ ಕೆಲ ದಿನಗಳ ಹಿಂದಷ್ಟೇ ಎರಡೂ ರಾಷ್ಟ್ರಗಳು ತಾತ್ಕಾಲಿಕ ಕದನ ವಿರಾಮ ಘೋಷಿಸಿದ್ದವು. ಅದರ ಮಾತುಕತೆಗಳು ಮುಂದುವರಿಯದ ಕಾರಣ, ಮತ್ತೆ ಯುದ್ಧ ಆರಂಭವಾಗಿದೆ. ಇಸ್ರೇಲ್ ಗಾಜಾ ಪಟ್ಟಿಯಲ್ಲಿ ಮತ್ತೆ ಮಾರಣ ಹೋಮ ಆರಂಭಿಸಿದೆ. ಇದರಿಂದ ತೀವ್ರ ಆಕ್ರೋಶಕ್ಕೀಡಾಗಿರುವ ಪ್ಯಾಲೆಸ್ಟೈನಿಯನ್ನರು, ಗಾಜಾ ಪಟ್ಟಿಯಲ್ಲಿ ಹಮಾಸ್ ಉಗ್ರರ ವಿರುದ್ಧವೇ ತಿರುಗಿಬಿದ್ದಿದ್ದಾರೆ. ಯುದ್ಧ ಮರು



ಆರಂಭವಾಗಿದ್ದಕ್ಕೆ ತೀವ್ರ ಕ್ರೋಧಗೊಂಡು ಕದನ ನಿಲ್ಲಿಸಲು ಆಗ್ರಹಿಸಿ ಪ್ರತಿಭಟನೆ ಆರಂಭಿಸಿದ್ದಾರೆ.


# ಮೊದಲ ಪಂದ್ಯದಲ್ಲಿ ಗೆದ್ದು ಬೀಗಿದ ಚೆನ್ನೈ




ಚೆನ್ನೈ: ರಚಿನ್ ರವೀಂದ್ರ ಮತ್ತು ರುತುರಾಜ್ ಗಾಯಕ್‌ವಾಡ್ ಅವರ ಭರ್ಜರಿ ಬ್ಯಾಟಿಂಗ್ ಮತ್ತು ನೂರ್ ಅಹಮದ್ ಹಾಗೂ ಖಲೀಲ್ ಅಹಮದ್ ಮಾರಕ ಬೌಲಿಂಗ್ ದಾಳಿಯಿಂದಾಗಿ ಮುಂಬೈ ಇಂಡಿಯನ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ಜಯ ಸಾಧಿಸಿತು. ಈ ಮೂಲಕ ಪ್ರಸಕ್ತ ಐಪಿಎಲ್‌ನಲ್ಲಿ ಚೆನ್ನೈ ತಂಡ ಶುಭಾರಂಭ ಮಾಡಿತು. ಟಾಸ್ ಗೆದ್ದ ಚೆನ್ನೈ, ಮುಂಬೈ ತಂಡಕ್ಕೆ ಮೊದಲು ಬ್ಯಾಟಿಂಗ್ ಅವಕಾಶ ನೀಡಿತು. ಚೆನ್ನೈ ಮಾರಕ ಬೌಲಿಂಗ್ ದಾಳಿಯಿಂದಾಗಿ ಮುಂಬೈ 9 ವಿಕೆಟ್ ನಷ್ಟಕ್ಕೆ 155 ರನ್ ಗಳಿಸಿ ಸಾಧಾರಣ ಮೊತ್ತ ಕಲೆ ಹಾಕಿತು.

# ಎಸ್. ಎಂ. ಕೃಷ್ಣ ಸ್ಮರಣಾರ್ಥ ಕೆಎಸ್ಎಲ್‌ಟಿಎ ಟೆನ್ನಿಸ್ ಪಂದ್ಯ

ಬೆಂಗಳೂರು: ದಶಕಗಳ ಕಾಲ ರಾಜ್ಯ ಲಾನ್ ಟೆನ್ನಿಸ್ ಅಸೋಸಿಯೇಷನ್ (KSLTA) ಅಧ್ಯಕ್ಷರಾಗಿ ಮುನ್ನಡೆಸಿದ, ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಎಂ.ಕೃಷ್ಣ ಅವರ ಸ್ಮರಣಾರ್ಥ ಟೆನ್ನಿಸ್ ಪಂದ್ಯಾವಳಿ ಆಯೋಜಿಸುವುದಾಗಿ ಕೆಎಸ್ಎಲ್‌ಟಿಎ ಘೋಷಿಸಿದೆ. ITF ಪುರುಷರ ಒ25 ಪಂದ್ಯಾವಳಿಯು ಮಾರ್ಚ್ 31ರಿಂದ ಏಪ್ರಿಲ್ 6ರವರೆಗೆ ಕೆಎಸ್ಎಲ್‌ಟಿಎ ಕ್ರೀಡಾಂಗಣದಲ್ಲಿ ನಡೆಯಲಿದೆ. ವಿಜೇತರು 30,000 ಯುಎಸ್ ಡಾಲರ್ ಬಹುಮಾನ ಪಡೆಯಲಿದ್ದಾರೆ. ಟೂರ್ನಿಯ ಅರ್ಹತಾ ಸುತ್ತುಗಳು



ಮಾರ್ಚ್ 29 ಮತ್ತು 30ರಂದು ನಡೆಯಲಿದ್ದು, ಮಾರ್ಚ್ 31ರಿಂದ ಮುಖ್ಯ ಸುತ್ತಿನ ಪಂದ್ಯಗಳು ಪ್ರಾರಂಭವಾಗಲಿವೆ.

# ಶ್ರೇಯಸ್ ಅಯ್ಯರ್ ಮರಳಿ ಒಪ್ಪಂದದ ಪಟ್ಟಿಗೆ ಸೇರುವ ಸಾಧ್ಯತೆ



ಮುಂಬೈ : ದೇಶೀಯ ಕ್ರಿಕೆಟ್ ಆಡದ ಕಾರಣ ಕಳೆದ ವರ್ಷ ಬಿಸಿಸಿಐ ಟೀಮ್ ಇಂಡಿಯಾದ ಸ್ಟಾರ್ ಬ್ಯಾಟರ್ ಶ್ರೇಯಸ್ ಅಯ್ಯರ್ ಅವರನ್ನು ಕೇಂದ್ರ ಒಪ್ಪಂದದಿಂದ ಕೈಬಿಟ್ಟಿತ್ತು. ಇತ್ತೀಚಿನ ದಿನಗಳಲ್ಲಿ ಶ್ರೇಯಸ್ ದೇಶೀಯ ಟೂರ್ನಿಗಳು ಮತ್ತು ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲೂ ಉತ್ತಮ ಪ್ರದರ್ಶನ ನೀಡುತ್ತಿದ್ದಾರೆ. ಚಾಂಪಿಯನ್ಸ್ ಟ್ರೋಫಿಯಲ್ಲಿ 243 ರನ್ ಗಳಿಸುವ ಮೂಲಕ ಭಾರತದ ಪರ ಅತಿ ಹೆಚ್ಚು ರನ್ ಗಳಿಸಿದ ಬ್ಯಾಟ್ಸ್‌ಮನ್ ಎನಿಸಿ ಕೊಂಡಿದ್ದು, ಈ ಹಿನ್ನೆಲೆ ಬಿಸಿಸಿಐ ಶ್ರೇಯಸ್ ಅವರನ್ನು ಮತ್ತೆ ಒಪ್ಪಂದದ ಪಟ್ಟಿಗೆ ಸೇರಿಸುವ ಸಾಧ್ಯತೆಗಳು ದಟ್ಟವಾಗಿವೆ.

# TCS ವರ್ಲ್ಡ್ 10K ಮ್ಯಾರಥಾನ್‌ಗೆ ಬೆಂಗಳೂರು ಸಜ್ಜು

ಬೆಂಗಳೂರು: TCS ವರ್ಲ್ಡ್ 10K ಮ್ಯಾರಥಾನ್‌ನ 17ನೇ ಆವೃತ್ತಿಗೆ ಬೆಂಗಳೂರು ಸಜ್ಜಾಗಿದೆ. 2,10,000 ಯುಎಸ್ ಡಾಲರ್ ಬಹುಮಾನದ ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೋಡ್ ರೇಸ್ ಏಪ್ರಿಲ್ 27ರಂದು ಬೆಂಗಳೂರಲ್ಲಿ ನಡೆಯಲಿದೆ. Endendigu Bengaluru - Forever Bengaluru ಧ್ಯೇಯವಾಕ್ಯದಡಿ ನಡೆಯಲಿರುವ ಈ ಓಟವು ರಾಷ್ಟ್ರೀಯ, ಅಂತಾರಾಷ್ಟ್ರೀಯ ಕ್ರೀಡಾಪಟುಗಳು, ಹವ್ಯಾಸಿ ಓಟಗಾರರನ್ನ ಒಟ್ಟುಗೂಡಿಸುತ್ತಿದೆ. 5K ಮತ್ತು 10K ಓಟದಲ್ಲಿ ಅಂತಾರಾಷ್ಟ್ರೀಯ ಖ್ಯಾತಿಯ ಉಗಾಂಡದ ಅಥ್ಲೀಟ್ ಜೋಶುವಾ ಕಿಪ್ರುಯಿ ಚೆಪ್ಟೆಗಿ ಭಾಗವಹಿಸಲಿದ್ದಾರೆ.




# ಸಂಬಳ ಪ್ಯಾಕೆಜ್ ಖಾತೆ ಕಡ್ಡಾಯಗೊಳಿಸಿ ಆದೇಶ



ಬೆಂಗಳೂರು: ಸರ್ಕಾರಿ ಸಿಬ್ಬಂದಿಗಳಿಗೆ ವಿವಿಧ ಬ್ಯಾಂಕ್‌ಗಳು ಒದಗಿಸುವ ಸಂಬಳ ಪ್ಯಾಕೇಜ್‌ಗಳ ಅಡಿಯಲ್ಲಿ ಖಾತೆಗಳನ್ನು ತೆರೆಯುವುದನ್ನು ಕಡ್ಡಾಯಗೊಳಿಸಿ ಆರ್ಥಿಕ ಇಲಾಖೆ ಆದೇಶ ಹೊರಡಿಸಿದೆ. ಸರ್ಕಾರಿ ನೌಕರರ ಮತ್ತು ಅವಲಂಬಿತ ಕುಟುಂಬ ಸದಸ್ಯರ ಹಿತಾಸಕ್ತಿಗಳನ್ನು ರಕ್ಷಿಸುವ ಸಲುವಾಗಿ ವಿವಿಧ ಬ್ಯಾಂಕ್‌ಗಳು ಒದಗಿಸುವ "ಸಂಬಳ ಪ್ಯಾಕೇಜ್‌ಗಳ" ಅಡಿಯಲ್ಲಿ ಖಾತೆಗಳನ್ನು ತೆರೆಯುವುದು, ಆಯ್ಕೆ ಮಾಡಿಕೊಳ್ಳುವುದನ್ನು ಕಡ್ಡಾಯಗೊಳಿಸಿದೆ. PMSBY ಯೋಜನೆಗಳ ಅಡಿಯಲ್ಲಿ ಸ್ವಯಂ ಪ್ರೇರಿತ ಆಧಾರದ ಮೇಲೆ ವಿಮಾ ರಕ್ಷಣೆಯನ್ನು ಪಡೆಯಲು ಅಧಿಕಾರಿ/ನೌಕರರಿಗೆ ಸಂಬಂಧಿತ ಇಲಾಖೆ ಉತ್ತೇಜಿಸಬೇಕು.

# ವರ್ತನೆಯನ್ನು ತಿದ್ದುವ ನಿಟ್ಟಿನಲ್ಲಿ ಅಮಾನಾತು–ಯು ಟಿ ಖಾದರ್


ಮಂಗಳೂರು: ವಿಧಾನಸಭೆಯಲ್ಲಿ ಸಭಾಧ್ಯಕ್ಷರ ಪೀಠಕ್ಕೆ ಹತ್ತಿ ದುಂಡಾವರ್ತನೆ ತೋರಿದ್ದ 18 ಶಾಸಕರನ್ನು 6 ತಿಂಗಳು ಅಮಾನತು ಗೊಳಿಸಿ ರುವುದು ಶಾಸಕರಿಗೆ ಶಿಕ್ಷೆ ಅಲ್ಲ. ಅವತ್ತು ನಡೆದ ಘಟನೆ ರಾಜ್ಯದ ಜನತೆಗೆ ಅಸಹ್ಯ ಮೂಡಿಸಿದ್ದು, ಶಾಸಕರು ತಮ್ಮ ವರ್ತನೆಯನ್ನು ತಿದ್ದಿ ಕೆಲಸ ಮಾಡುವ



ನಿಟ್ಟಿನಲ್ಲಿ ಕ್ರಮ ವಹಿಸಲಾಗಿದೆ. ಮತ್ತೆ ಇಂತಹ ವರ್ತನೆ ಮುಂದುವರಿಸಿದರೆ ಒಂದು ವರ್ಷ ಅಮಾನತು ಅಥವಾ ಕಾಯ್ದೆಯಡಿ ಲಭ್ಯವಿರುವ ಕಠಿಣ ಕ್ರಮವನ್ನು ಕೈಗೊಳ್ಳಲಾಗುತ್ತದೆ ಎಂದು ವಿಧಾನಸಭಾಧ್ಯಕ್ಷ ಯು. ಟಿ. ಖಾದರ್ ತಮ್ಮ ನಡೆಯನ್ನು ಸಮರ್ಥಿಸಿಕೊಂಡರು.

# ಸೆಷನ್ಸ್ ನ್ಯಾಯಾಲಯದ ಆದೇಶವನ್ನು ರದ್ದು ಮಾಡಿದ ಹೈಕೋರ್ಟ್

ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ (ಬಿಬಿಎಂಪಿ) 2005 ಮತ್ತು 2012ರ ಅವಧಿಯಲ್ಲಿ ನಡೆದ ಗುತ್ತಿಗೆ ಕಾಮಗಾರಿ ಅವ್ಯವಹಾರದಲ್ಲಿ ಪಾಲಿಕೆಯ ನಿವೃತ್ತ ಮುಖ್ಯ ಎಂಜಿನಿಯರ್ ಬಿ.ಟಿ.ರಮೇಶ್ ಸೇರಿದಂತೆ ಹಲವು ಹಾಲಿ ಹಾಗೂ ನಿವೃತ್ತ ಎಂಜಿನಿಯರ್ ಮತ್ತು ಗುತ್ತಿಗೆದಾರರಿಗೆ ತೀವ್ರ ಹಿನ್ನಡೆಯಾಗಿದ್ದು, ಎಲ್ಲರ ವಿರುದ್ಧದ ಆರೋಪಗಳನ್ನು ಕೈಬಿಟ್ಟು ಅಧೀನ ನ್ಯಾಯಾಲಯ ಹೊರಡಿಸಿದ್ದ ಆದೇಶವನ್ನು ಹೈಕೋರ್ಟ್ ರದ್ದುಗೊಳಿಸಿದೆ. ಯಾವ ಆರೋಪಿಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಪೂರ್ವಾನುಮತಿ ನೀಡಿಲ್ಲವೋ, ಅಂತಹವರ ವಿರುದ್ಧ ವಿಚಾರಣೆ ನಡೆಸುವಂತಿಲ್ಲ ಎಂದು ಸೆಷನ್ಸ್ ನ್ಯಾಯಾಲಯ ನಿರ್ದೇಶಿಸಿದೆ.



# ರಾಜ್ಯೋತ್ಸವ ಪ್ರಶಸ್ತಿಗೆ ಸರ್ಕಾರದಿಂದಲೇ ನೇರ ಆಯ್ಕೆ !

ಬೆಂಗಳೂರು: ರಾಜ್ಯ ಸರ್ಕಾರದಿಂದ ಕೊಡಮಾಡುವ ಪ್ರತಿಷ್ಠಿತ ರಾಜ್ಯೋತ್ಸವ ಪ್ರಶಸ್ತಿಗಳನ್ನು ಅರ್ಜಿಗಳಿಂದ ಮುಕ್ತಗೊಳಿಸಿ ಸರ್ಕಾರದಿಂದಲೇ ನೇರವಾಗಿ ಅರ್ಹ ಸಾಧಕರನ್ನು ಆಯ್ಕೆ ಮಾಡುವ ಪದ್ಧತಿಯನ್ನು ಜಾರಿಗೆ ತರಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗಂಭೀರ




ಚಿಂತನೆ ನಡೆಸುತ್ತಿದೆ. "ಈ ಬಗ್ಗೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ" ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್.ತಿಳಿಸಿದ್ದಾರೆ.

# ಹನಿಟ್ರ್ಯಾಪ್‌ಗೆ ಕಾಯ್ದೆ ತಿದ್ದುಪಡಿ ಆಗಬೇಕು–ವಿನಯ್ ಕುಲಕರ್ಣಿ



ಧಾರವಾಡ: "ಹನಿಟ್ರ್ಯಾಪ್ ಮಾಡೋದು ಕೆಳಮಟ್ಟದ ರಾಜಕಾರಣವಾಗಿದೆ" ಎಂದು ಶಾಸಕ ವಿನಯ್ ಕುಲಕರ್ಣಿ ಹೇಳಿದರು. ಧಾರವಾಡ ಹೊರವಲಯದ ಕಿತ್ತೂರಿನಲ್ಲಿ ಮಾತನಾಡಿದ ಅವರು, "ನಮ್ಮನ್ನು ಜನಸಾಮಾನ್ಯರು ನೋಡುತ್ತಿದ್ದಾರೆ. ಹನಿಟ್ರ್ಯಾಪ್ ಬಗ್ಗೆ ನನಗೆ ಅಷ್ಟೊಂದು ಮಾಹಿತಿ ಇಲ್ಲ. ರಾಜಕಾರಣದಲ್ಲಿ ಮಹಿಳೆಯರನ್ನು ಮುಂದೆ ಬಿಟ್ಟು ಇಂತಹ ಕೆಲಸಗಳು ನಡೆಯುತ್ತಿವೆ. ಹನಿಟ್ರ್ಯಾಪ್ ಮಾಡೋದರ ಬಗ್ಗೆ ಸದನದಲ್ಲಿ ಚರ್ಚೆ ಆಗಿದೆ. ಇದಕ್ಕೆ ಕಾಯ್ದೆ, ತಿದ್ದುಪಡಿ ಆಗಬೇಕು" ಎಂದು ಆಗ್ರಹಿಸಿದರು.

# ಯತ್ನಾಳ್ ಮೂರನೇ ಬಾರಿಗೆ ಬಿಜೆಪಿ ಪಕ್ಷದಿಂದ ಉಚ್ಚಾಟನೆ...!


ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ಬಹುದೊಡ್ಡ ಬೆಳವಣಿಗೆ ನಡೆದಿದ್ದು ಪದೇ ಪದೇ ಸ್ವಪಕ್ಷದ ನಾಯಕರ ವಿರುದ್ಧವೇ ವಾಗ್ದಾಳಿ ನಡೆಸುತ್ತಿದ್ದ ವಿಜಯಪುರ ನಗರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಇದೀಗ ಬಿಜೆಪಿಯ ಶಿಸ್ತು ಸಮಿತಿಯು 3ನೇ ಬಾರಿಗೆ 6 ವರ್ಷಗಳ ಕಾಲ ಪಕ್ಷದಿಂದ ಉಚ್ಚಾ



ಟನೆ ಮಾಡಿ ಆದೇಶ ಹೊರಡಿಸಿದೆ. ಪದೇಪದೇ ರಾಜ್ಯ ಬಿಜೆಪಿ ನಾಯಕರ ವಿರುದ್ಧ ಗಂಭೀರವಾದ ಆರೋಪಗಳನ್ನು ಮಾಡುತ್ತಲೇ ಬಂದಿದ್ದ ಯತ್ನಾಳ್ ಅವರಿಗೆ ಈಗಾಗಲೇ ಹಲವಾರು ಬಾರಿ ಶಿಸ್ತು ಸಮಿತಿಯು ನೋಟಿಸ್ ನೀಡಿತ್ತು. ಅವರನ್ನು ಉಚ್ಚಾಟಿಸಿ ಬಿಜೆಪಿ ಕೇಂದ್ರೀಯ ಶಿಸ್ತು ಸಮಿತಿ ಆದೇಶ ಹೊರಡಿಸಿದೆ.

# 'ಸೌಗಾತ್–ಎ–ಮೋದಿ' ಅಭಿಯಾನ : ಮುಸ್ಲಿಮರಿಗೆ ವಿಶೇಷ ಕಿಟ್ !

ನವದೆಹಲಿ: ಈದ್ ಹಬ್ಬಕ್ಕೆ ಮುಂಚಿತವಾಗಿ ಭಾರತೀಯ ಜನತಾ ಪಕ್ಷ (ಬಿಜೆಪಿ) ಅಲ್ಪಸಂಖ್ಯಾತ ಮೋರ್ಚಾ "ಸೌಗಾತ್–ಎ–ಮೋದಿ" ಅಭಿಯಾನವನ್ನು ಪ್ರಾರಂಭಿಸಲಿದೆ. ಈ ಅಭಿಯಾನದ ಅಂಗವಾಗಿ ದೇಶಾದ್ಯಂತದ 32 ಲಕ್ಷ ದೀನದಲಿತ ಮುಸ್ಲಿಮರಿಗೆ ವಿಶೇಷ ಕಿಟ್‌ಗಳನ್ನು ಬಿಜೆಪಿ ವಿತರಿಸಲಿದೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರ ಮಾರ್ಗದರ್ಶನದಲ್ಲಿ ಮಂಗಳವಾರ ದೆಹಲಿಯ ನಿಜಾಮುದ್ದೀನ್‌ನಿಂದ ಅಭಿಯಾನ ಪ್ರಾರಂಭವಾಗಿದೆ. ಬಡ ಮುಸ್ಲಿಂ ಕುಟುಂಬಗಳು ಕೂಡ ಯಾವುದೇ ಸಮಸ್ಯೆ ಇಲ್ಲದೆ ಹಬ್ಬವನ್ನು ಆಚರಿಸಲಿ ಎಂಬ ಉದ್ದೇಶದಿಂದ ಅವರಿಗೆ ಕಿಟ್‌ಗಳನ್ನು ನೀಡಲಾಗುತ್ತಿದೆ.



# ಮಹಾರಾಷ್ಟ್ರದಲ್ಲಿ ಬುಲ್ಡೋಜರ್ ಕಾರ್ಯಾಚರಣೆ

ಮಹಾರಾಷ್ಟ್ರ: ನಾಗ್ಪುರ ಹಿಂಸಾಚಾರ ಪ್ರಕರಣದ ಆರೋಪಿ ಫಾಹೀಮ್ ಖಾನ್ ವಿರುದ್ಧ ಬುಲ್ಡೋಜರ್ ಕಾರ್ಯಾಚರಣೆಗೆ ಪೊಲೀಸರು ಮುಂದಾಗಿದ್ದಾರೆ. ಮಾರ್ಚ್ 17ರಂದು ನಾಗ್ಪುರಲ್ಲಿ ಔರಂಗಜೇಬನ ಸಮಾಧಿ ಕೆಡವುವಂತೆ ಒಂದು ಕೋಮಿಗೆ ಸೇರಿದ ಸಂಘಟನೆಯೊಂದು ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ,



ಒಂದು ಸಮುದಾಯದ ಪವಿತ್ರ ಗ್ರಂಥವನ್ನು ಸುಟ್ಟುಹಾಕಲಾಗಿದೆ ಎಂಬ ವದಂತಿ ಹಿಂಸಾಚಾರಕ್ಕೆ ಕಾರಣವಾಗಿತ್ತು. ಮಾರ್ಚ್ 22ರಂದು ಈ ಹಿಂಸಾಚಾರ ಪ್ರಕರಣ ಕುರಿತು ಮಾತನಾಡಿದ ಸಿಎಂ ದೇವೇಂದ್ರ ಫಡ್ನವೀಸ್ ಪ್ರಕರಣದ ಸಂಬಂಧ, 4 ಎಫ್‌ಐಆರ್‌ಆಗಿದ್ದು, 92 ಜನರನ್ನು ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದರು.


# ಹಕ್ಕುಚ್ಯುತಿ ನೋಟಿಸ್ ನೀಡಿದ ಜೈರಾಮ್ ರಮೇಶ್



ನವದೆಹಲಿ : ಕರ್ನಾಟಕ ಉಪಮುಖ್ಯಮಂತ್ರಿ ಡಿ. ಕೆ ಶಿವಕುಮಾರ್ ಅವರು ನೀಡಿರುವ ಮೀಸಲಾತಿ ಕುರಿತ ಹೇಳಿಕೆಗಳ ಕುರಿತು ಸದನವನ್ನು ದಿಕ್ಕು ತಪ್ಪಿಸಿದ್ದಾರೆ ಎಂದು ಆರೋಪಿಸಿ ಸಭಾನಾಯಕ ಜೆ ಪಿ ನಡ್ಡಾ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ವಿರುದ್ಧ ರಾಜ್ಯಸಭೆಯಲ್ಲಿ ಕಾಂಗ್ರೆಸ್‌ನ ಮುಖ್ಯ ಸಚೇತಕ ಜೈರಾಮ್ ರಮೇಶ್ ಅವರು, ಹಕ್ಕುಚ್ಯುತಿ ನೋಟಿಸ್ ನೀಡಿದ್ದಾರೆ. ರಮೇಶ್ ಅವರು ರಾಜ್ಯಸಭೆಯಲ್ಲಿ (ರಾಜ್ಯಸಭೆ) ಕಾರ್ಯ ವಿಧಾನ ಮತ್ತು ವ್ಯವಹಾರದ ನಿಯಮಗಳ ನಿಯಮ 188ರ ಅಡಿ ಈ ಇಬ್ಬರು ನಾಯಕರ ವಿರುದ್ಧ ಎರಡು ಪ್ರತ್ಯೇಕ ನೋಟಿಸ್ ನೀಡಿದ್ದಾರೆ.

# ಸಿಎಂ ನಿತೀಶ್ ಇಫ್ತಾರ್ ಕೂಟದಿಂದ ಮುಸ್ಲಿಂ ಸಂಘಟನೆ ದೂರ

ಬಿಹಾರ : ಬಿಹಾರ ವಿಧಾನಸಭೆ ಚುನಾವಣೆ ಸಮೀಪಿಸುತ್ತಿದೆ. ರಾಜಕೀಯ ಪಕ್ಷಗಳ ಚಟುವಟಿಕೆಗಳೂ ಗರಿಗೆದರಿವೆ. ಬಿಜೆಪಿ ಮತ್ತು ಜೆಡಿಯು ಮೈತ್ರಿ ಸರ್ಕಾರ ಮತ್ತೊಮ್ಮೆ ಅಧಿಕಾರದ ಗದ್ದುಗೆಗೇರುವ ನಿರೀಕ್ಷೆಯಲ್ಲಿವೆ. ಸದ್ಯ ರಂಜಾನ್ ಆಚರಣೆ ನಡೆಯುತ್ತಿದೆ. ಸಿಎಂ ನಿತೀಶ್



ಕುಮಾರ್ ಇಫ್ತಾರ್ ಕೂಟ ಆಯೋಜಿಸಿದ್ದಾರೆ. ಈ ಕಾರ್ಯಕ್ರಮಕ್ಕೆ ಬರುವುದಿಲ್ಲ ಎಂದು ಮುಸ್ಲಿಂ ಸಂಘಟನೆಯೊಂದು ಘೋಷಿಸಿದೆ. ಇದಕ್ಕೆ ರಾಜಕೀಯ ಕಾರಣ ನೀಡಿದೆ. ಮುಖ್ಯಮಂತ್ರಿ ನಿವಾಸದ ಇಫ್ತಾರ್ ಕೂಟದ ಆಹ್ವಾನವನ್ನು ತಿರಸ್ಕರಿಸಿದ್ದಾಗಿ ಇಮಾರತ್ ಶರಿಯಾ ಹೇಳಿದೆ.

# ಅತಿಶಿಗೆ ದೆಹಲಿ ಹೈ ಕೋರ್ಟ್‌ನಿಂದ ನೋಟಿಸ್

ನವದೆಹಲಿ: ದೆಹಲಿ ವಿಧಾನಸಭಾ ಚುನಾವಣೆ ವೇಳೆ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿ ಮತ್ತು ಆಪ್ ನಾಯಕಿ ಅತಿಶಿ ಅವರು ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿ ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್ ಪ್ರತಿಪಕ್ಷ ನಾಯಕಿ ಹಾಗೂ ಮಾಜಿ ಮುಖ್ಯಮಂತ್ರಿ ಅತಿಶಿ ಅವರಿಗೆ ನೋಟಿಸ್ ಜಾರಿ ಮಾಡಿದೆ. ನ್ಯಾಯಮೂರ್ತಿ ಜ್ಯೋತಿ ಸಿಂಗ್ ಚುನಾವಣಾ ಆಯೋಗ, ದೆಹಲಿ ಪೊಲೀಸರು ಮತ್ತು ಅತಿಶಿ ಚುನಾವಣೆಯಲ್ಲಿ ಗೆಲುವು ಕಂಡ ವಿಧಾನಸಭಾ ಕ್ಷೇತ್ರ ಕಲ್ಕಾಜಿ ಚುನಾವಣಾ ಅಧಿಕಾರಿಗೆ ನೋಟಿಸ್ ಜಾರಿ ಮಾಡಿದೆ.



# ಅತ್ಯಾಚಾರದ ಬಗೆಗಿನ ವಿವಾದಿತ ತೀರ್ಪಿಗೆ ಸುಪ್ರೀಂ ಕೋರ್ಟ್ ತಡೆ

ನವದೆಹಲಿ: ಬಾಲಕಿಯ ಸ್ತನಗಳನ್ನು ಹಿಡಿಯುವುದು, ಆಕೆಯ ಪೈಜಾಮದ ದಾರ ಎಳೆಯುವುದು, ಮತ್ತು ಆಕೆಯನ್ನು ಚರಂಡಿಗೆ ಎಳೆಯಲು ಪ್ರಯತ್ನಿಸುವುದಷ್ಟೇ ಅತ್ಯಾಚಾರ ಅಥವಾ ಅತ್ಯಾಚಾರ ಪ್ರಯತ್ನದ ಅಪರಾಧವಾಗುವುದಿಲ್ಲ ಎಂಬ ಅಲಹಾಬಾದ್ ಹೈಕೋರ್ಟ್‌ನ ಇತ್ತೀಚಿ



ನ ವಿವಾದಾತ್ಮಕ ತೀರ್ಪಿಗೆ ಸುಪ್ರೀಂ ಕೋರ್ಟ್ ತಡೆ ನೀಡಿತು. ಅಲಹಾಬಾದ್ ಹೈಕೋರ್ಟ್ ನೀಡಿದ ತೀರ್ಪನ್ನು ಸುಪ್ರೀಂಕೋರ್ಟ್ ಸ್ವಯಂ ಪ್ರೇರಿತವಾಗಿ ವಿಚಾರಣೆಗೆ ಪರಿ ಗಣಿಸಿದೆ. ನ್ಯಾ. ಬಿ.ಆರ್. ಗವಾಯಿ ಮತ್ತು ಆಗಸ್ಟೀನ್ ಜಾರ್ಜ್ ಮಸಿಹ್ ಪೀಠ ವಿಚಾರಣೆ ನಡೆಸಿತು.




## ಸ್ಯಾಂಡಲ್ ವುಡ್ ಪ್ರವೇಶಿಸಿದ ಖ್ಯಾತ ಗಾಯಕಿ ದೀಪ್ತಿ ಸುರೇಶ್

ಪುರಾತನ ಫಿಲಂಸ್ ನಿರ್ಮಾಣದ, ಶ್ರೀಕಾಂತ್ ಹುಣಸೂರು ನಿರ್ದೇಶನದ ಹಾಗೂ ಪ್ರಣಂ ದೇವರಾಜ್ ನಾಯಕನಾಗಿ ನಟಿಸಿರುವ "S\O ಮುತ್ತಣ್ಣ" ಚಿತ್ರಕ್ಕಾಗಿ ಜಯಂತ ಕಾಯ್ಕಿಣಿ ಅವರು ಬರೆದಿರುವ "ಕರೆದರೆ ಹಾಗೆಲಾ ಬರಲಾರೆ ನಾನು" ಎಂಬ ಹಾಡನ್ನು ತಮಿಳು ಹಾಗೂ ಹಿಂದಿ ಚಿತ್ರಗಳ ಪ್ರಸಿದ್ಧ ಗೀತೆಗಳನ್ನು ಹಾಡಿ ಜನಪ್ರಿಯರಾಗಿರುವ ಗಾಯಕಿ ದೀಪ್ತಿ ಸುರೇಶ್ ಹಾಡಿದ್ದಾರೆ. ಈ ಹಾಡನ್ನು ಹಾಡುವ ಮೂಲಕ ದೀಪ್ತಿ ಸುರೇಶ್ ಸ್ಯಾಂಡಲ್ ವುಡ್‌ಗೆ ಪ್ರವೇಶ ಮಾಡಿದ್ದಾರೆ. ಸಚಿನ್ ಬಸ್ರೂರ್ ಈ ಚಿತ್ರಕ್ಕೆ ಸಂಗೀತ ನೀಡಿದ್ದಾರೆ. "ಮಾಮನ್ನನ್", "ಬೇಬಿ ಜಾನ್", "ಮಾರಾ", "ಜವಾನ್", "ವೆಟ್ಟೈಯನ್" ಮುಂತಾದ ಚಿತ್ರಗಳ ಹಾಡುಗಳನ್ನು ತಮ್ಮದೇ ಆದ ವಿಶಿಷ್ಟವಾದ ಧ್ವನಿಯ ಮೂಲಕ ಹಾಡುವುದರೊಂದಿಗೆ ದೀಪ್ತಿ ಸುರೇಶ್ ಕೇಳುಗರ ಮನ ಗೆದ್ದಿದ್ದಾರೆ. ಅದರಲ್ಲೂ ಉದಯನಿಧಿ ಸ್ಟಾಲಿನ್ ಅಭಿನಯದ "ಮಾಮನ್ನನ್" ಚಿತ್ರದ "ಕೊಡಿ ಪರಕುರ ಕಾಲಂ" ಹಾಗೂ ರಜನಿಕಾಂತ್ ಅಭಿನಯದ "ವೆಟ್ಟೈಯನ್" ಚಿತ್ರದ "ಮನಸಿಲಾಯೊ" ಹಾಡುಗಳಂತೂ ಮಿಲಿಯನ್ ಗಟ್ಟಲೆ ವೀಕ್ಷಣೆಯಾಗಿ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ "S/O ಮುತ್ತಣ್ಣ" ಚಿತ್ರದ ಈ ಹಾಡು ಸಹ ದೀಪ್ತಿ ಸುರೇಶ್ ಅವರ ಗಾಯನದಲ್ಲಿ ಉತ್ತಮವಾಗಿ ಮೂಡಿಬಂದಿದೆ. ಸದ್ಯದಲ್ಲೇ ಈ ಹಾಡು A2 music ಮೂಲಕ ಅನಾವರಣವಾಗಲಿದೆ. ತಂದೆ–ಮಗನ ಬಾಂಧವ್ಯದ ಕಥಾಹಂದರ ಹೊಂದಿರುವ ಈ ಚಿತ್ರದ ಚಿತ್ರೀಕರಣ ಹಾಗೂ ಪೋಸ್ಟ್ ಪ್ರೊಡಕ್ಷನ್ ವರ್ಕ್ ಮುಕ್ತಾಯವಾಗಿದ್ದು, ತೆರೆಗೆ ಬರಲು ಸಿದ್ಧವಾಗಿದೆ. ಜಾಕ್ ಮಂಜು ಅವರ ನೇತೃತ್ವದ ಶಾಲಿನಿ ಆರ್ಟ್ಸ್ ಸಂಸ್ಥೆ ಈ ಚಿತ್ರವನ್ನು ವಿತರಣೆ ಮಾಡಲಿದೆ. ಪುರಾತನ ಫಿಲಂಸ್ ನಿರ್ಮಾಣ ಮಾಡಿರುವ ಸಿನಿಮಾಗೆ ಎಸ್.ಆರ್.ಕೆ. ಫಿಲಂಸ್ ಸಾಥ್ ನೀಡಿದೆ. ಪ್ರಣಂ ದೇವರಾಜ್ ಅವರಿಗೆ ನಾಯಕಿಯಾಗಿ "ದಿಯಾ" ಖ್ಯಾತಿಯ ಖುಷಿ ರವಿ ಅಭಿನಯಿಸಿದ್ದಾರೆ. ರಂಗಾಯಣ ರಘು ನಾಯಕನ ತಂದೆಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಸುಚೇಂದ್ರ ಪ್ರಸಾದ್, ಗಿರೀಶ್ ಶಿವಣ್ಣ, ತಬಲ ನಾಣಿ, ಶ್ರೀನಿವಾಸ್ ಪ್ರಭು, ಸುಧಾ ಬೆಳವಾಡಿ, ಅರುಣ್ ಚಕ್ರವರ್ತಿ ಮುಂತಾದವರು ತಾರಾಬಳಗದಲ್ಲಿದ್ದಾರೆ. ಸಚಿನ್ ಬಸ್ರೂರು ಸಂಗೀತವಿರುವ `s/o ಮುತ್ತಣ್ಣ' ಸಿನಿಮಾದ ಹಾಡುಗಳನ್ನು ಯೋಗರಾಜ್ ಭಟ್, ಜಯಂತ್ ಕಾಯ್ಕಿಣಿ, ಪ್ರಮೋದ್ ಮರವಂತೆ ಬರೆದಿದ್ದಾರೆ. ಸ್ಕೇಟಿಂಗ್ ಕೃಷ್ಣ ಛಾಯಾಗ್ರಹಣ, ಹರೀಶ್ ಕೊಮ್ಮೆ ಅವರ ಸಂಕಲನ ಬಹು ನಿರೀಕ್ಷಿತ ಈ ಚಿತ್ರಕ್ಕಿದೆ.



## ಮಾರ್ಚ್ 28ಕ್ಕೆ ಅಮೇಜಾನ್ ಪ್ರೈಮ್‌ನಲ್ಲಿ 'ತಾಯಿ ಕಸ್ತೂರ್ ಗಾಂಧಿ'

ಬರಗೂರು ರಾಮಚಂದ್ರಪ್ಪನವರು ನಿರ್ದೇಶಿಸಿರುವ ಜನಮಿತ್ರ ಮೂವೀಸ್ ನಿರ್ಮಾಣದ "ತಾಯಿ ಕಸ್ತೂರ್ ಗಾಂಧಿ" ಕನ್ನಡ ಚಿತ್ರವು ಇದೇ ಮಾರ್ಚ್ 28ರಂದು ಅಮೇಜಾನ್ ಪ್ರೈಮ್ ಓ.ಟಿ.ಟಿ.ಯಲ್ಲಿ ಬಿಡುಗಡೆಯಾಗಲಿದೆ. ಬರಗೂರರ ಕಾದಂಬರಿಯನ್ನು ಆಧರಿಸಿ ಈ ಚಿತ್ರವು ನಿರ್ಮಾಣಗೊಂಡಿದೆ. ನಮ್ಮ ದೇಶದಲ್ಲಿ ಕಸ್ತೂರ್‌ಬಾ ಅವರನ್ನೇ ಕೇಂದ್ರವಾಗಿಟ್ಟುಕೊಂಡು ನಿರ್ಮಾಣವಾದ ಮೊದಲ ಚಿತ್ರವೆಂಬ ಹೆಗ್ಗಳಿಕೆಗೂ ಇದು ಪಾತ್ರವಾಗಿದೆ. ಕಸ್ತೂರ್‌ಬಾ ಅವರ ಬದುಕಿನ ಕೆಲವು ಪ್ರಮುಖ ಘಟನೆಗಳ ಮೂಲಕ ಆದರ್ಶ ಮತ್ತು ಕಟುವಾಸ್ತವಗಳ ಕಥನವನ್ನು ಈ ಚಿತ್ರದಲ್ಲಿ ಕಟ್ಟಿಕೊಡಲಾಗಿದೆ. ಬದುಕಿನ ದ್ವಂದ್ವಗಳನ್ನು ಎದುರಿಸುತ್ತಲೇ ಅದನ್ನು ಮೀರುವ ವ್ಯಕ್ತಿತ್ವಗಳಾಗಿ ಕಸ್ತೂರ್ ಬಾ ಮತ್ತು ಗಾಂಧಿಜಿಯವರನ್ನು ಚಿತ್ರಿಸಲಾಗಿದೆ. ಕಸ್ತೂರ್ ಬಾ ಅವರು ತಾಯಿ, ಪತ್ನಿ ಮತ್ತು ಹೋರಾಟಗಾರ್ತಿಯಾಗಿ ಬದುಕನ್ನು ನಿಭಾಯಿಸಿದ ಚರಿತೆಯನ್ನು ಈ ಚಿತ್ರವು ಅನಾವರಣಗೊಳಿಸುತ್ತದೆ. ಇದು ಏಕಕಾಲಕ್ಕೆ ಕಸ್ತೂರ್ ಬಾ ಮತ್ತು ಗಾಂಧಿಜಿ – ಇಬ್ಬರ ವ್ಯಕ್ತಿತ್ವವನ್ನು ಒಳಗೊಂಡ ಚಿತ್ರವಾಗಿದೆ. 'ತಾಯಿ ಕಸ್ತೂರ್ ಗಾಂಧಿ' ಚಿತ್ರವು ಕೆಲವು ವಿದೇಶಿ ಅಂತರಾಷ್ಟ್ರೀಯ ಚಿತ್ರೋತ್ಸವಗಳಿಗೆ ಆಯ್ಕೆಗಾಗಿದ್ದು ಲಾಸ್ ಏಂಜಲೀಸ್ ಚಿತ್ರೋತ್ಸವದಲ್ಲಿ ಉತ್ತಮ ಚಿತ್ರ ಪ್ರಶಸ್ತಿಗೆ ಭಾಜನವಾಗಿದೆ. ಸುರೇಶ್ ಅರಸು ಅವರಿಗೆ ಉತ್ತಮ ಸಂಕಲನಕಾರ ಪ್ರಶಸ್ತಿಯೂ ಬಂದಿದೆ. ಕಸ್ತೂರ್ ಬಾ ಮತ್ತು ಗಾಂಧಿಜಿಯವರ ಬಾಲ್ಯ, ಯೌವನ ಮತ್ತು ಮುಪ್ಪಿನ ಹಂತಗಳು ಈ ಚಿತ್ರದಲ್ಲಿವೆ. ಕಸ್ತೂರ್‌ಬಾ ಪಾತ್ರದಲ್ಲಿ ಹರಿಪ್ರಿಯ ಮತ್ತು ಗಾಂಧಿಯಾಗಿ ಕಿಶೋರ್ ಅಭಿನಯಿಸಿದ್ದಾರೆ. ಶ್ರೀನಾಥ್ ಅವರು ಅಂಬೇಡ್ಕರ್ ಪಾತ್ರದಲ್ಲಿದ್ದಾರೆ. ಮಾಸ್ಟರ್ ಆಕಾಂಕ್ಷ ಬರಗೂರು, ಸುಂದರರಾಜು, ಪ್ರಮೀಳಾ ಜೋಷಾಯ್, ರಾಘವ್, ಸುಂದರರಾಜ ಅರಸು, ರೇಖಾ, ವೆಂಕಟರಾಜು, ವತ್ಸಲಾ ಮೋಹನ್, ಕು ಸ್ಪಂದನ ಮುಂತಾದವರು ತಾರಾಗಣದಲ್ಲಿದ್ದಾರೆ. ಸುರೇಶ್ ಅರಸು ಸಂಕಲನ, ನಾಗರಾಜ ಆದವಾನಿ ಛಾಯಾಗ್ರಹಣ, ಶಮಿತಾ ಮಲ್ನಾಡ್ ಸಂಗೀತ ನಿರ್ದೇಶನ ಮತ್ತು ಮೈತ್ರಿ ಬರಗೂರು ಕಲಾ ನಿರ್ದೇಶನ ಮಾಡಿರುವ ಈ ಚಿತ್ರದ ನಿರ್ಮಾಪಕರು ಗೀತಾ ಬಿ.ಜಿ. ಬರಗೂರರು ಚಿತ್ರಕತೆ, ಸಂಭಾಷಣೆ ಗೀತರಚನೆ ಜೊತೆಗೆ ನಿರ್ದೇಶಿಸಿದ್ದಾರೆ.




## ಹುತಾತ್ಮ ಪೊಲೀಸ್ ಅಧಿಕಾರಿ ಕಥೆ 'ಬಂಡೆ ಸಾಹೇಬ್'

ಕಳೆದ ಕೆಲವುವರ್ಷಗಳ ಹಿಂದೆ ಗುಲ್ಬರ್ಗದಲ್ಲಿ ರೌಡಿ ಶೀಟರ್ ಮುನ್ನಾನನ್ನು ಸೆರೆಹಿಡಿಯುವ ಸಂದರ್ಭದಲ್ಲಿ ಶೂಟೌಟ್‌ಗೆ ಬಲಿಯಾದ ಹುತಾತ್ಮ ಪೊಲೀಸ್ ಅಧಿಕಾರಿ(ಪಿ.ಎಸ್.ಐ) ಮಲ್ಲಿಕಾರ್ಜುನ ಬಂಡೆ ಕುರಿತಾದ ಚಿತ್ರವೊಂದು ನಿರ್ಮಾಣವಾಗಿದೆ. ನೈಜಘಟನೆ ಆಧಾರಿತ ಈ ಚಿತ್ರಕ್ಕೆ "ಬಂಡೆ ಸಾಹೇಬ್" ಎಂದು ಹೆಸರಿಡಲಾಗಿದೆ. ಚಿತ್ರದ ನಾಯಕನಾಗಿ ಸಂತೋಷ್ ರಾಮ್ ನಟಿಸಿದ್ದಾರೆ. "ಕೃಷ್ಣ ರುಕ್ಮಿಣಿ" ಸೇರಿದಂತೆ ಹಲವು ಜನಪ್ರಿಯ ಧಾರಾವಾಹಿಗಳಲ್ಲಿ ಹಾಗೂ "ಟೋನಿ" ಸೇರಿದಂತೆ ಅನೇಕ ಸೂಪರ್ ಹಿಟ್ ಚಿತ್ರಗಳಲ್ಲಿ ಅಭಿನಯಿಸಿರುವ ಸಂತೋಷ್ ರಾಮ್, "ಪಂಟ್ರು" ಚಿತ್ರದ ಮೂಲಕ ನಾಯಕನಾದರು. ಸಂತೋಷ್ ರಾಮ್ ಅವರಿಗೆ ನಾಯಕನಾಗಿ ಇದು ಎರಡನೇ ಚಿತ್ರ. ದಕ್ಷ ಪೊಲೀಸ್ ಅಧಿಕಾರಿಯೊಬ್ಬರ ಪಾತ್ರದಲ್ಲಿ ಅಭಿನಯಿಸಿರುವುದು ನಿಜಕ್ಕೂ ಹೆಮ್ಮೆ ಎನ್ನುತ್ತಾರೆ ನಾಯಕ ಸಂತೋಷ್ ರಾಮ್. ಮಾಡೆಲಿಂಗ್ ಕ್ಷೇತ್ರದಲ್ಲಿ ಗುರುತಿಸಿಕೊಂಡಿರುವ ಕಾವ್ಯ ಭಾರದ್ವಾಜ್ ಈ ಚಿತ್ರದ ನಾಯಕಿ. ವೀರಣ್ಣ ಕೊರಳ್ಳಿ, ಬಿರಾದಾರ್, ಸಿಂಬಾ ಮುಂತಾದವರು ತಾರಾಬಳಗದಲ್ಲಿದ್ದಾರೆ. ಮಲ್ಲಿಗೆ ಸಿನಿ ಕಂಬೈನ್ಸ್ ಲಾಂಛನದಲ್ಲಿ ಗೋಪಣ್ಣ ದೊಡ್ಮನಿ, ಕಮಲ ದೊಡ್ಮನಿ ಹಾಗೂ ಮಾಲವಿ ಕೊರಳ್ಳಿ ನಿರ್ಮಿಸಿರುವ ಈ ಚಿತ್ರವನ್ನು ಚಿನ್ಮಯ್ ರಾಮ್ ನಿರ್ದೇಶಿಸಿದ್ದಾರೆ. "ಕುರುಕ್ಷೇತ್ರ","ದಿ ವಿಲನ್" ಸೇರಿದಂತೆ ಕೆಲವು ಚಿತ್ರಗಳಿಗೆ ಅಸಿಸ್ಟೆಂಟ್ ಡೈರೆಕ್ಟರ್ ಆಗಿ ಕಾರ್ಯ ನಿರ್ವಹಿಸಿರುವ ಚಿನ್ಮಯ್ ರಾಮ್ ಅವರಿಗೆ "ಬಂಡೆ ಸಾಹೇಬ್" ಮೊದಲ ನಿರ್ದೇಶನದ ಚಿತ್ರ. ಪ್ರಸ್ತುತ ಈ ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದ್ದು, ಗುಲ್ಬರ್ಗ ಹಾಗೂ ಬೆಂಗಳೂರಿನಲ್ಲಿ ಚಿತ್ರೀಕರಣ ನಡೆದಿದೆ. ಚಿತ್ರದಲ್ಲಿ ಎಂ.ಎಸ್ ತ್ಯಾಗರಾಜ್ ಸಂಗೀತ ನೀಡಿರುವ ನಾಲ್ಕು ಹಾಡುಗಳಿವೆ. ಸದ್ಯದಲ್ಲೇ ಹೆಸರಾಂತ ಮ್ಯೂಸಿಕ್ ಸಂಸ್ಥೆಯ ಮೂಲಕ ಹಾಡುಗಳ ಅನಾವರಣವಾಗಲಿದೆ. ಪ್ರಮುಖಪಾತ್ರದಲ್ಲಿ ಅಭಿನಯಿಸಿರುವ ವೀರಣ್ಣ ಕೊರಳ್ಳಿ ಈ ಚಿತ್ರಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದಿದ್ದಾರೆ.




## ಶಾಸಕ ಪ್ರಿಯಕೃಷ್ಣ ಅವರಿಂದ ಪೋಸ್ಟರ್ ಅನಾವರಣ

ಕನ್ನಡ ಚಿತ್ರರಂಗದ ಪ್ರತಿಭಾನ್ವಿತ ನಟರಾದ ಕರಾಟೆ ಕಿಂಗ್ ಶಂಕರ್‌ನಾಗ್ ಹಾಗೂ ಪವರ್‌ಸ್ಟಾರ್ ಪುನೀತ್ ರಾಜಕುಮಾರ್ ಅವರ ವಿಶೇಷ ಪೋಸ್ಟರ್ ಇತ್ತೀಚೆಗೆ ನಡೆದ ಪುನೀತ್ ರಾಜಕುಮಾರ್ ಅವರ ಹುಟ್ಟು ಹಬ್ಬದ ದಿನ "ಮೈಲಾಪುರ" ಚಿತ್ರತಂಡ ಬಿಡುಗಡೆ ಮಾಡಿದೆ. ಜನಪ್ರಿಯ ಶಾಸಕರಾದ ಪ್ರಿಯಕೃಷ್ಣ ಈ ವಿಶೇಷ ಪೋಸ್ಟರ್ ಅನಾವರಣ ಮಾಡಿದ್ದಾರೆ. ಪೋಸ್ಟರ್ ಬಿಡುಗಡೆ ಮಾಡಿದ ಪ್ರಿಯಕೃಷ್ಣ ಅವರು ಇದೇ ಮಾಸಂತ್ಯಕ್ಕೆ ಬಿಡುಗಡೆಯಾಗಲಿರುವ "ಮೈಲಾಪುರ" ಚಿತ್ರ ಯಶಸ್ವಿಯಾಗಲಿ ಎಂದು ಹಾರೈಸಿದ್ದಾರೆ. ಇತ್ತೀಚೆಗೆ ನಡೆದ ಮಹಾ ಕುಂಭಮೇಳದ ಸಂದರ್ಭದಲ್ಲಿ ಈ ಚಿತ್ರದ ನಿರ್ಮಾಪಕರಲ್ಲೊಬ್ಬರಾದ ವಿ. ಅಂತರಿಕ್ಷ್ ನಿಧನರಾದರು. ಈ ಚಿತ್ರದ ಪೋಸ್ಟರ್ ಬಿಡುಗಡೆ ಸಂದರ್ಭದಲ್ಲಿ ಶಾಸಕರಾದ ಪ್ರಿಯಕೃಷ್ಣ ಅವರು ಅಂತರಿಕ್ಷ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು ಹಾಗೂ ಅವರ ಕುಟುಂಬದವರಿಗೆ ಸಾಂತ್ವನ ಹೇಳಿದರು. ಎಲ್ಲರ ಕಷ್ಟಕ್ಕೆ ಸ್ಪಂದಿಸುವ ಗುಣವಿರುವ ಶಾಸಕ ಪ್ರಿಯಕೃಷ್ಣ ಅವರಿಗೆ ಚಿತ್ರತಂಡದ ಸದಸ್ಯರು ಧನ್ಯವಾದ ತಿಳಿಸಿದರು. ಶುಭ ವಾಸುಕಿ, ಅಂತರಿಕ್ಷ ವಿ, ಅನಂತ ಪದ್ಮನಾಭ ಹಾಗೂ ವಾಸುಕಿ ಆಚಾರ್ಯ ನಿರ್ಮಿಸಿರುವ, ಫಣಿರಾಮ್ ನಿರ್ದೇಶನದ ಈ ಚಿತ್ರದ ಮೂಲಕ ಭರತ್ ಕುಮಾರ್ ಎಂಬ ಯುವನಟ ನಾಯಕನಾಗಿ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ನಿಧಿ ಸುಬ್ಬಯ್ಯ, ಕಿಶೋರ್, ಮನದೀಪ ರಾಯ್, ಐಶ್ವರ್ಯ ಸಿಂದೋಗಿ, ಕಿಶನ್ ಬೆಳಿಗಲಿ, ಅಂತರಿಕ್ಷ, ಶುಭ ವಾಸುಕಿ ತಾರಾಬಳಗದಲ್ಲಿದ್ದಾರೆ. ಆನಂದ್ ಇಳಯರಾಜ ಛಾಯಾಗ್ರಹಣ, ವೇದ್ ಸಂಕಲನ, ಸೂರಜ್ ಜೋಯಿಸ್ ಸಂಗೀತ ನಿರ್ದೇಶನ "ಮೈಲಾಪುರ" ಚಿತ್ರಕ್ಕಿದೆ.



## 'BAD' ಚಿತ್ರ ಈ ವಾರ ತೆರೆಗೆ

ಪಿ.ಸಿ.ಶೇಖರ್ ನಿರ್ದೇಶನದ, ಎಸ್.ಆರ್. ವೆಂಕಟೇಶ್ ಗೌಡ ನಿರ್ಮಿಸಿರುವ ಹಾಗೂ ನಕುಲ್ ಗೌಡ ನಾಯಕನಾಗಿ ನಟಿಸಿರುವ ಬಹು ನಿರೀಕ್ಷಿತ "BAD" ಚಿತ್ರ ಈ ವಾರ ಮಾರ್ಚ್ 28ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಅರ್ಜುನ್ ಜನ್ಯ ಸಂಗೀತ ನಿರ್ದೇಶನವಿರುವ "BAD" ಚಿತ್ರಕ್ಕೆ ನಿರ್ದೇಶಕ ಪಿ.ಸಿ.ಶೇಖರ್ ಸಂಕಲನ ಕಾರ್ಯ ಮಾಡಿದ್ದಾರೆ. ಜಿ. ರಾಜಶೇಖರ್ ಕಲಾ ನಿರ್ದೇಶನ ಹಾಗೂ ಶಕ್ತಿ ಶೇಖರ್ ಛಾಯಾಗ್ರಹಣವಿರುವ "BAD" ಚಿತ್ರಕ್ಕೆ ಸಚಿನ್ ಜಗದೀಶ್ವರ್ ಎಸ್. ಬಿ. ಸಂಭಾಷಣೆ ಬರೆದಿದ್ದಾರೆ. "ಪ್ರೀತಿಯ ರಾಯಭಾರಿ" ಚಿತ್ರದ ಮೂಲಕ ಜನರ ಮನ ಗೆದ್ದಿರುವ ನಕುಲ್ ಗೌಡ "BAD" ಚಿತ್ರದ ನಾಯಕನಾಗಿ ಕಾಣಿಸಿಕೊಂಡಿದ್ದು, ಮಾನ್ವಿತ ಹರೀಶ್, ಸಾಯಿಕೃಷ್ಣ, ಅಪೂರ್ವ ಭಾರದ್ವಾಜ್, ಮಂಜುನಾಥ್, ಅಶ್ವಿನಿ, ಪದ್ಮ ಶಿವಮೊಗ್ಗ ಈ ಚಿತ್ರದ ತಾರಾಬಳಗದಲ್ಲಿದ್ದಾರೆ.



## ಎಲ್ಲಾ ಕಡೆ ಸದ್ದು ಮಾಡುತ್ತಿದೆ 'ಕರಳೆ'ಚಿತ್ರದ ಪೋಸ್ಟರ್

ಈ ಹಿಂದೆ ಕಲಿವೀರ, ಕನ್ನಡದೇಶದೊಳ್ ಚಿತ್ರ ಮಾಡಿದ ನಿರ್ದೇಶಕ ಅವಿರಾಮ್ ಕಂಠೀರವ ಮತ್ತೊಮ್ಮೆ ವಿಭಿನ್ನ ಕಥಾಹಂದರ ಹೊಂದಿರುವ "ಕರಳೆ" ಎಂಬ ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ಇದು ನೈಜ ಘಟನೆ ಆಧಾರಿತ ಚಿತ್ರ, ಈಗಾಗಲೇ ಎರಡು ಹಂತದ ಚಿತ್ರೀಕರಣ ಪೂರ್ಣಗೊಳಿಸಿರುವ ಚಿತ್ರತಂಡ ಮೂರನೇ ಹಂತದ ಚಿತ್ರೀಕರಣಕ್ಕೆ ಸಜ್ಜಾಗಿದೆ. ಇದು ಮಹಿಳಾ ಪ್ರಧಾನ ಚಿತ್ರವಾಗಿದ್ದು ಇತ್ತೀಚೆಗೆ ಚಿತ್ರದ ಮೊದಲ ಪೋಸ್ಟರ್ ಬಿಡುಗಡೆಗೊಳಿಸಿದೆ. ಪೋಸ್ಟರ್ ಎಲ್ಲಾಕಡೆ ಬಾರಿ ಮೆಚ್ಚುಗೆ ಗಳಿಸಿದೆ, ಚಿತ್ರದಲ್ಲಿ ಸಮಾಜದ ವಾಸ್ತವ ಅಂಶಗಳನ್ನೇ ಇಲ್ಲಿ ಚಿತ್ರೀಸಲಾಗುತ್ತಿದೆ, ಎಮೋಷನಲ್, ರಾ, ಮನಕಲಕುವ ದೃಶ್ಯಗಳು ಚಿತ್ರದಲ್ಲಿ ಇರಲಿವೆ ಎಂದು ನಿರ್ದೇಶಕರ ಮಾತು. ಈಗಾಗಲೇ ಚಿಂತಾಮಣಿ, ಮದ್ದೂರು, ಹುಲಿರಾಯನದುರ್ಗ ಸೇರಿ ಹಲವು ಕಡೆ ಶೂಟಿಂಗ್ ನೆಡೆಸಲಾಗಿದೆ ಎಂದು ಮಾಹಿತಿ ನೀಡಿದರು. ಕನ್ನಡ, ಚೈನೀಸ್ ಭಾಷೆಯಲ್ಲಿ ಸಿನಿಮಾ ಭಾರತ ಹಾಗೂ ಚೀನಾ ದೇಶಕ್ಕೆ ಸಾಮ್ಯತೆ ಹೊಂದಿರುವ ಕಥೆ ಇದಾಗಿದ್ದು, ಹೀಗಾಗಿ ಈ ಚಿತ್ರವನ್ನು ಕನ್ನಡ ಹಾಗೂ ಚೈನೀಸ್ ಭಾಷೆಯಲ್ಲಿ ತೆರೆಗೆ ತರಲು ನಿರ್ದೇಶಕ ಅವಿರಾಮ್ ಕಂಠೀರವ ಸಿದ್ಧತೆ ನೆಡೆಸುತ್ತಿದ್ದಾರೆ, ಎರಡು ದೇಶಗಳಲ್ಲಿ ನೆಡೆಯುವ ಘಟನೆಗಳಿಗೆ ಸಾಮ್ಯತೆ ಇರುವ ಕಾರಣ ಕನ್ನಡ ಚೈನೀಸ್ ಭಾಷೆಯಲ್ಲಿ ಸಿನಿಮಾ ನಿರ್ಮಿಸುತ್ತಿದ್ದೇವೆ ಎಂದರು.



## ತೆರೆಗೆ ಯೋಗರಾಜ್ ಭಟ್ ನಿರ್ದೇಶನದ 'ಮನದ ಕಡಲು'

E.K.ಎಂಟರ್‌ಟೈನರ್ಸ್ ಲಾಂಛನದಲ್ಲಿ ಇ. ಕೃಷ್ಣಪ್ಪ ಅವರು ನಿರ್ಮಿಸಿ, ಯೋಗರಾಜ್ ಭಟ್ ನಿರ್ದೇಶಿಸಿದ್ದ ಯಶಸ್ವಿ "ಮುಂಗಾರು ಮಳೆ" ಚಿತ್ರದ ನಂತರ ಇದೇ ಕಾಂಬಿನೇಷನ್‌ನಲ್ಲಿ ಮೂಡಿಬಂದಿರುವ "ಮನದ ಕಡಲು" ಚಿತ್ರ ಈ ವಾರ ರಾಜ್ಯಾದ್ಯಂತ (ಮಾರ್ಚ್ 28) ಬಿಡುಗಡೆಯಾಗುತ್ತಿದೆ. ಜಿ.ಗಂಗಾಧರ್ ಅವರ ಸಹ ನಿರ್ಮಾಣ ಹಾಗೂ ಪ್ರತಾಪ್ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ ನಿರ್ವಹಿಸಿರುವ ಈ ಚಿತ್ರ ಈಗಾಗಲೇ ಟೀಸರ್, ಟ್ರೇಲರ್ ಹಾಗೂ ಹಾಡುಗಳ ಮೂಲಕ ಪ್ರೇಕ್ಷಕರ ಮನ ಗೆದ್ದಿದೆ. ನಾಯಕನಾಗಿ ಸುಮುಖ ಅಭಿನಯಿಸಿದ್ದಾರೆ. ನಾಯಕಿಯರಾಗಿ ರಾಶಿಕಾ ಶೆಟ್ಟಿ ಹಾಗೂ ಅಂಜಲಿ ಅನೀಶ್ ನಟಿಸಿದ್ದಾರೆ. ರಂಗಾಯಣ ರಘು, ದತ್ತಣ್ಣ, ಶಿವಧ್ವಜ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ವಿ.ಹರಿಕೃಷ್ಣ ಸಂಗೀತ ಸಂಯೋಜಿಸಿರುವ ಈ ಚಿತ್ರದ ಹಾಡುಗಳನ್ನು ಜಯಂತ ಕಾಯ್ಕಿಣಿ, ಯೋಗರಾಜ್ ಭಟ್ ಬರೆದಿದ್ದಾರೆ. ಸಂತೋಷ್ ರೈ ಪಾತಾಜೆ ಛಾಯಾಗ್ರಹಣ, ಕೆ.ಎಂ.ಪ್ರಕಾಶ್ ಸಂಕಲನ, ಶಿವಕುಮಾರ್ ಕಲಾ ನಿರ್ದೇಶನ ಮಾಡಿದ್ದಾರೆ.



## 'ಫೈರ್ ಫ್ಲೈ' ಸಿನಿಮಾದ ಮೊದಲ ಹಾಡು ರಿಲೀಸ್

ಶ್ರೀ ಮುತ್ತು ಸಿನಿ ಸರ್ವೀಸಸ್ ಅಂಡ್ ಪ್ರೊಡಕ್ಷನ್ ಬ್ಯಾನರ್ ಮೂಲಕ ನಿವೇದಿತಾ ಶಿವರಾಜ್ ಕುಮಾರ್ ನಿರ್ಮಾಣದ ಚೊಚ್ಚಲ ಸಿನಿಮಾ ಫೈರ್‌ಫ್ಲೈ ಈಗಾಗಲೇ ನಾನಾ ವಿಷಯಗಳಿಂದ ಸುದ್ದಿಯಲ್ಲಿದೆ. ಪೋಸ್ಟರ್, ಟೀಸರ್ ನಿಂದಲೇ ಕುತೂಹಲ ಹೆಚ್ಚಿಸಿರುವ ಈ ಚಿತ್ರದ ಮೊದಲ ಹಾಡು ಬಿಡುಗಡೆಯಾಗಿದೆ. ಆನಂದ್ ಆಡಿಯೋ ಯೂಟ್ಯೂಬ್ ನಲ್ಲಿ ಇನ್ ದಿ ನೈಟ್ ಎಂಬ ಮೆಲೋಡಿ ಗೀತೆಯನ್ನು ಅನಾವರಣ ಮಾಡಲಾಗಿದೆ. ಧನಂಜಯ್ ರಂಜನ್ ಸಾಹಿತ್ಯ ಬರೆದಿರುವ ಗೀತೆಗ ಸಾಹಿತ್ಯ ಬರೆದಿದ್ದು, ಕಪಿಲ್ ಕಪಿಲನ್ ಧ್ವನಿಯಾಗಿದ್ದಾರೆ. ಚರಣ್ ರಾಜ್ ಸಂಗೀತ ನಿರ್ದೇಶನ ಮಾಡಿದ್ದಾರೆ. ಇನ್ ದಿ ನೈಟ್ ಎನ್ನುತ್ತಾ ವಂಶಿ ಹಾಗೂ ರಚನಾ ಹೆಜ್ಜೆ ಹಾಕಿದ್ದಾರೆ. ನಿವೇದಿತಾ ನಿರ್ಮಾಣದ 'ಫೈರ್‌ಫ್ಲೈ' ಸಿನಿಮಾದಲ್ಲಿ ವಂಶಿ ಹೀರೋ ಜೊತೆ ನಿರ್ದೇಶಕರಾಗಿ ಕೆಲಸ ಮಾಡಿದ್ದಾರೆ. ಉಳಿದಂತೆ, ಅಚ್ಯುತ್ ಕುಮಾರ್, ಸುಧಾರಾಣಿ, ರಚನಾ ಇಂದರ್, ಶೀತಲ್ ಶೆಟ್ಟಿ, ಆನಂದ್ ನೀನಾಸಂ, ಚಿತ್ಕಳಾ ಬಿರಾದರ್, ಮೂಗು ಸುರೇಶ್ ನಟಿಸಿದ್ದಾರೆ. ಈ ಚಿತ್ರದ ಹಾಡುಗಳಿಗೆ ಚರಣ್ ರಾಜ್ ಸಂಗೀತ ನೀಡಿದ್ದಾರೆ.



## ಮಲೆನಾಡ ಮಡಿಲ ಪದವನ್ನು ಹಾಡಿದ ಆದರ್ಶ ಅಯ್ಯಂಗಾರ್

ಇಷ್ಟಕಾಮ್ಯ ಕೇಶವ ಪ್ರೊಡಕ್ಷನ್ಸ್ ಮತ್ತು ಸಿನಿವ್ಯಾಟಿಕ್ಸ್ ಬ್ಯಾನರಿನ ಅಡಿಯಲ್ಲಿ ಆದರ್ಶ್ ಅಯ್ಯಂಗಾರ್ ಅವರು ನಿರ್ಮಿಸಿ ಅವರೆ ಹಾಡಿರುವ 'ಪದವೇ' ಎಂಬ ಹಾಡು 'ಆದರ್ಶ್ ಅಯ್ಯಂಗಾರ್' ಯೂಟ್ಯೂಬ್ ಚಾನಲಿನಲ್ಲಿ ಬಿಡುಗಡೆಯಾಗಿದೆ. ಇದು ಆದರ್ಶ್ ಅಯ್ಯಂಗಾರ್ ಅವರು ತಮ್ಮ ಬ್ಯಾನರ್ ಮೂಲಕ ಹೊರ ತರುತ್ತಿರುವ ಏಳನೇ ವಿಡಿಯೋ ಹಾಡಾಗಿದ್ದು ಅವರ ನಿರ್ಮಾಣದ "ತಿಮ್ಮನ ಮೊಟ್ಟೆಗಳು" ಚಿತ್ರ ಕೂಡ ಬಿಡುಗಡೆಗೆ ಸಿದ್ಧವಾಗಿದೆ. ಸುಂದರ ತಾಣಗಳಲ್ಲಿ ಚಿತ್ರೀಕರಿಸಿರುವ ಹಾಡಿಗೆ ಹೇಮಂತ್ ಜೋಯಿಸ್ ಸಂಗೀತ ನೀಡಿದ್ದು ರಕ್ಷಿತ್ ತೀರ್ಥಹಳ್ಳಿ ಸಾಹಿತ್ಯ ಬರೆದು ನಿರ್ದೇಶನ ಮಾಡಿದ್ದಾರೆ. ಕಿರಿಕ್ ಪಾರ್ಟಿ ಚಿತ್ರದಲ್ಲಿ ನಟಿಸಿದ್ದ ಶಂಕರಮೂರ್ತಿ ಈ ಹಾಡಿನಲ್ಲಿ ಪಾತ್ರ ನಿರ್ವಹಿಸಿದ್ದಾರೆ. ಅವರ ಜೊತೆಗೆ ಆದರ್ಶ್ ಅಯ್ಯಂಗಾರ್, ಹೊಸ ಪ್ರತಿಭೆ ಸಂದೀಪ್ ಕುಂದಾದ್ರಿ ಪ್ರಮುಖ ಪಾತ್ರದಲ್ಲಿದ್ದಾರೆ.




## ಯುಗಾದಿ ಹಬ್ಬದಂದು '45' ಚಿತ್ರದ ಟೀಸರ್

ಕರುನಾಡ ಚಕ್ರವರ್ತಿ ಶಿವರಾಜಕುಮಾರ್, ರಿಯಲ್ ಸ್ಟಾರ್ ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಪ್ರಮುಖಪಾತ್ರದಲ್ಲಿ ನಟಿಸಿರುವ, ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಎಂ. ರಮೇಶ್ ರೆಡ್ಡಿ ಅವರು ತಮ್ಮ "ಸೂರಜ್ ಪ್ರೊಡಕ್ಷನ್" ಬ್ಯಾನರ್‌ನಲ್ಲಿ ನಿರ್ಮಿಸುತ್ತಿರುವ ಕನ್ನಡದ ಬಹುನಿರೀಕ್ಷಿತ ಮಲ್ಟಿಸ್ಟಾರರ್ "45" ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಇತ್ತೀಚಿಗೆ ಚಿತ್ರದ ಬಿಡುಗಡೆ ದಿನಾಂಕ ಘೋಷಣೆಯನ್ನು ಸಹ ವಿಭಿನ್ನವಾಗಿ ಮಾಡಲಾಗಿತ್ತು. ಆಗಸ್ಟ್ 15ರಂದು ಅಭಿಮಾನಿಗಳು ಕಾತುರದಿಂದ ಕಾಯುತ್ತಿರುವ ಈ ಚಿತ್ರ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಅದಕ್ಕೂ ಮುನ್ನ ಮಾರ್ಚ್ 30, ವಸಂತ ಋತುವಿನ ಮೊದಲ ದಿನ, ಯುಗಾದಿ ಹಬ್ಬದ ಶುಭದಿನದ ಸಂಜೆ 6.45ಕ್ಕೆ "45" ಚಿತ್ರದ ಟೀಸರ್ ಅನಾವರಣವಾಗಲಿದೆ.




ಕರಾವಳಿ ತರಂಗಿಣಿ



# ಸಿನಿ ತರಂಗಿಣಿ

## ರಾಜಸ್ಥಾನದಲ್ಲಿ ಚಾಲೆಂಜಿಂಗ್ ಸ್ಟಾರ್ ಡೆವಿಲ್..



ಶ್ರೀ ಜೈ ಮಾತ ಕಂಬೈನ್ಸ್ ಲಾಂಛನದಲ್ಲಿ ಅದ್ದೂರಿಯಾಗಿ ನಿರ್ಮಾಣವಾಗುತ್ತಿರುವ, ಪ್ರಕಾಶ್ ವೀರ್ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸುತ್ತಿರುವ ಹಾಗೂ ಚಾಲೆಂಜಿಂಗ್ ಸ್ಟಾರ್ ದರ್ಶನ್ ನಾಯಕರಾಗಿ ನಟಿಸುತ್ತಿರುವ "ದಿ ಡೆವಿಲ್" ಚಿತ್ರದ ಚಿತ್ರೀಕರಣ ರಾಜಸ್ಥಾನದಲ್ಲಿ ಬಿರುಸಿನಿಂದ ಸಾಗಿದೆ. ಮಾತಿನ ಭಾಗದ ಚಿತ್ರೀಕರಣ ನಡೆಯುತ್ತಿದ್ದು, ಚಾಲೆಂಜಿಂಗ್ ಸ್ಟಾರ್ ದರ್ಶನ್, ರಚನ ರೈ, ಮಹೇಶ್ ಮಂಜ್ರೇಕರ್, ಅಚ್ಯುತಕುಮಾರ್ ಮುಂತಾದ ಕಲಾವಿದರು ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ. ಸುಧಾಕರ್ ಎಸ್ ರಾಜ್ ಅವರ ಛಾಯಾಗ್ರಹಣವಿರುವ "ದಿ ಡೆವಿಲ್" ಚಿತ್ರಕ್ಕೆ ಬಿ. ಅಜನೀಶ್ ಲೋಕನಾಥ್ ಸಂಗೀತ , ಮೋಹನ್ ಬಿ ಕೆರೆ ಕಲಾ ನಿರ್ದೇಶನ ಹಾಗೂ ರಾಮ್ ಲಕ್ಷ್ಮಣ್ ಅವರ ಸಾಹಸ ನಿರ್ದೇಶನವಿದೆ. ದರ್ಶನ್ ಅವರಿಗೆ ನಾಯಕಿಯಾಗಿ ರಚನ ರೈ ಅಭಿನಯಿಸುತ್ತಿದ್ದಾರೆ.

## ಕನ್ನಡ ಕಾಳಜಿ ಸಾರುವ ಭಾರತಿ ಟೀಚರ್..



ಹೆಸರಿನಲ್ಲೇ ಆಕರ್ಷಣೆ, ಕುತೂಹಲ ಹುಟ್ಟಿಸುವ ಭಾರತಿ ಟೀಚರ್ ಏಳನೇ ತರಗತಿ ಚಿತ್ರದ ಟೀಸರ್ ಬಿಡುಗಡೆ ಸಮಾರಂಭವು ಎಸ್‌ಆರ್‌ವಿ ಚಿತ್ರಮಂದಿರದಲ್ಲಿ ಅದ್ದೂರಿಯಾಗಿ ನಡೆಯಿತು. ರಾಘವೇಂದ್ರ ರೆಡ್ಡಿ ಪೂಜ್ಯಾಯ ಫಿಲಂಸ್ ಅಡಿಯಲ್ಲಿ ನಿರ್ಮಾಣ ಮಾಡುತ್ತಿದ್ದು, ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ, ಸಂಗೀತ ಮತ್ತು ನಿರ್ದೇಶನವನ್ನು ಎಂ.ಎಲ್.ಪ್ರಸನ್ನ ನಿರ್ವಹಿಸಿದ್ದಾರೆ. ಕ್ರಿಷಿ ಸಂಸ್ಥೆ ವೆಂಕಟ್‌ಗೌಡ ಕ್ರಿಯೇಟೀವ್ ಹೆಡ್. ಶಿಕ್ಷಕರಾಗಿ ಸಿಹಿಕಹಿಚಂದ್ರು, ನಾಯಕಿಯಾಗಿ ಕು. ಯಶಿಕಾ, ಗೋವಿಂದೇ ಗೌಡ, ಅಶ್ವಿನ್ ಹಾಸನ್, ದಿವ್ಯಾ ಅಂಚನ್, ಬೆನಕಾ ನಂಜಪ್ಪ, ರೋಹಿತ್‌ರಾಘವೇಂದ್ರ, ಸೌಜನ್ಯ ಸುನಿಲ್, ಎಂ. ಜೆ. ರಂಗಸ್ವಾಮಿ ಹಾಗೂ ಜಿಲ್ಲಾಧಿಕಾರಿ ಪಾತ್ರದಲ್ಲಿ ಹಾಲಿ ಕಾರ್ಮಿಕ ಸಚಿವರಾಗಿರುವ ಸಂತೋಷ್. ಎಸ್. ಲಾಡ್ ಬಣ್ಣ ಹಚ್ಚಿರುವುದು ವಿಶೇಷ.

## ಬೆಂಗಳೂರಿನಲ್ಲಿ ಲೂಸಿಫರ್–2 ಪ್ರಮೋಷನ್..

ಮಾಲಿವುಡ್ ಸಿನಿಮಾ 'ಎಲ್ 2 ಎಂಪುರಾನ್' ತೆರೆಗೆ ಬಂದಿದೆ. ಈಗಾಗಲೇ ನಾನಾ ರಾಜ್ಯದಲ್ಲಿ ಅದ್ದೂರಿಯಾಗಿ ಪ್ರಚಾರ ಮಾಡಿರುವ ಚಿತ್ರತಂಡ ಬೆಂಗಳೂರಿನಲ್ಲಿ ಪ್ರಚಾರ ನಡೆಸಿದೆ. ನಗರದ ಓರಿಯಾನ್ ಮಾಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಲಿವುಡ್ ಸೂಪರ್ ಸ್ಟಾರ್ ಮೋಹನ್ ಲಾಲ್, ಚಿತ್ರದ ನಿರ್ದೇಶಕ ಪೃಥ್ವಿರಾಜ್ ಸುಕುಮಾರನ್, ನಟಿ ಮಂಜು ವಾರಿಯರ್, ನಟ ಟೊವಿನೋ ಥಾಮಸ್ ಭಾಗಿಯಾಗಿದ್ದರು. ಪೃಥ್ವಿರಾಜ್ ಸುಕುಮಾರನ್ ನಿರ್ದೇಶಿಸಿ ನಟಿಸಿರುವ 'ಎಲ್–2 ಎಂಪುರಾನ್' ಮಲಯಾಳಂ, ತೆಲುಗು, ತಮಿಳು, ಕನ್ನಡ ಮತ್ತು ಹಿಂದಿ ಭಾಷೆಗಳಲ್ಲಿ ವಿಶ್ವದಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಿದೆ. ಲೂಸಿಫರ್ ಸೀಕ್ವೆಲ್ ಆಗಿರುವುದರಿಂದ ಈ ಚಿತ್ರದ ಮೇಲೆ ನಿರೀಕ್ಷೆ ಹೆಚ್ಚಿದೆ. ಪೃಥ್ವಿರಾಜ್ ಸುಕುಮಾರನ್ ಈ ಚಿತ್ರಕ್ಕೆ ಸ್ಯಾಂಡಲ್ವುಡ್ನ ಪ್ರತಿಷ್ಠಿತ ನಿರ್ಮಾಣ ಸಂಸ್ಥೆಯಾದ ಹೊಂಬಾಳೆ ಫಿಲ್ಮ್ಸ್ ಸಾಥ್ ನೀಡಿದೆ.



## ಕಲ್ಯಾಣ ಕರ್ನಾಟಕದಲ್ಲಿ ಮರಳಿ ಮನಸಾಗಿದೆ..

ಬೆನಕ ಟಾಕೀಸ್ ಲಾಂಛನದಲ್ಲಿ ಮುದೇಗೌಡ್ರು ನವೀನ್ ಕುಮಾರ್ ಆರ್ ಓ ಹಾಗೂ ತೆಲಿಗಿ ಮಲ್ಲಿಕಾರ್ಜುನಪ್ಪ ನಿರ್ಮಿಸಿರುವ, ನಾಗರಾಜ್ ಶಂಕರ್ ನಿರ್ದೇಶನದಲ್ಲಿ ಅರ್ಜುನ್ ವೇದಾಂತ್ ನಾಯಕರಾಗಿ ನಟಿಸಿರುವ "ಮರಳಿ ಮನಸಾಗಿದೆ" ಚಿತ್ರದ ಎರಡನೇ ಹಾಡನ್ನು ಸಾರಂಗಧರ ದೇಶಿಕೇಂದ್ರ ಮಹಾಸ್ವಾಮೀಜಿಗಳು ಮಾರ್ಚ್ 23 ರಂದು ಕಲ್ಬುರ್ಗಿ ನಗರದ ಸಂಗಮ ಥಿಯೇಟರ್‌ನಲ್ಲಿ ಅನಾವರಣ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ತಿಪ್ಪಣಪ್ಪ ಕಮಕನೂರ, ದಾವಲಸಾಬ ಕಮತಗಿ ಗುತ್ತೆದಾರ, ಪ್ರಕಾಶ ಯಂಕಂಚಿ ಉದ್ದಿಮೆದಾರರು, ಬಸವರಾಜ ಬೂದಿಹಾಳ, ಬಸವರಾಜ ಗುಂಡಲಗೆರಿ, ಕಲಬುರ್ಗಿ ಅವ್ವಣ್ಣ ಮ್ಯಾಕೇರಿ. ನೀಲಕಂಠ ಮುಲಗೆ, ಶಿವಾನಂದ ಹೊನ್ನಗುಂಟಿ, ಸಿದ್ದು ನಾಗೂರು ಹಾಗೂ ಮರಳಿ ಮನಸಾಗಿದೆ ಚಿತ್ರ ತಂಡ ಉಪಸ್ಥಿತರಿದ್ದರು.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212